ಸಂಪುಟ : 9 ಸಂಚಿಕೆ 54 ಪುಟ : 4 ಬೆಲೆ: 3.00 ಗುರುವಾರ ಮಾರ್ಚ್ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

WALK IN INTERVIEW
Vacancy open
Bagalkot , Bijapur , Bidar , Kalaburgi, Mangalore , Belgaum
(Required For Bank Recovery and Collections)
- Filed collection Executive
- Two wheeler Must
- Salary up to 15000/- & Attractive Incentives Facility

Contact Number : 8310034934

Volume : 9 Issue : 54 Pages : 4 Price : 3.00 Thursday March 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 28-3-2024 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

**ಸ್ಥಳಗಳ ವಿವರ :** ವಾರ್ಡ್ ನಂ. 22ರಲ್ಲಿ ಈಶ್ವರಗುಡಿ ಲೈನ್, ಗಿರಣಿ ಲೈನ್, ದಖನಿಯವರ ಲೈನ್, ಧಾರವಾಡದವರ್ ಲೈನ್, 1ರಿಂದ 5ರವರೆಗೆ 24 * 7, ವಾರ್ಡ್ ನಂ. 33, 32, 31, 23, ನ್ಯಾವಳ್ಳಿ ಬಸಯ್ಯ ಡಾಕ್ಟರ್ ಲೈನ್, ಪುರದ್ ಭಾಗ 1,2, ತಾಜನಗರ, ಉದಯನಗರ, ನರಗುಂದ ಕುದರಿಯವರ ಲೈನ್, ಅನಪಿನ್ ಓಣಿ ಲೈನ್,

ವಾರ್ಡ್ ನಂ. 1ರಲ್ಲಿ ಎಸ್. ಎಮ್. ಕೃಷ್ಣ ನಗರ ಮೇಲಿನ ಭಾಗ-ಕೆಳಗಿನ ಭಾಗ, ವಾರ್ಡ್ ನಂ 7 ಪೆಂಡಾರಿ ಮಲ್ಲೇಶಪ್ಪನ ಲೈನ್, ನಂದರಗಿ ಅಬ್ಬಿಗೇರಿ ಲೈನ್, ಗಚ್ಚಿಯವರ್ ಲೈನ್, ಚನ್ನೇಗೌಡ, ವಾರ್ಡ್ ನಂ. 31, 32 ರಲ್ಲಿ ದಾಸರ ಓಣಿ, ಭಜಂತ್ರಿ ಓಣಿ, ಲಕ್ಷ್ಮಿ ಗುಡಿ, ಏಳು ಮಕ್ಕಳ ತಾಯಿ ಗುಡಿ, ಹಳೆ ಕಚೇರಿ ರಸ್ತೆ, ಜೋಡ ಮಾರುತಿ ಗುಡಿ, ಗುಜ್ಜರ ಬಸ್ತಿ ಲೈನ್, ಜೆಂಡರ್ ಕಟ್ಟಿಂಗ್, ರಾಚೋಟೇಶ್ವರ ಮುಂದಿನ ಭಾಗ, ರಂಗನವಾಡ 1ನೇ ನಂಬರ್ ಶಾಲೆ, ಪೋಸ್ಟ್ ಆಫೀಸ್ ಲೈನ್ ಉಳಿದ ಕೆಲವು ಭಾಗಗಳು

**ವಿಶೇಷ ಸೂಚನೆ :** ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 29ರಂದು ರಂಗಪಂಚಮಿ ನಿಮಿತ್ತ ಗದಗ ಶಹರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದ ಆವರಣದಲ್ಲಿರುವ ಈಜುಕೊಳ, ರಾಜೀವಗಾಂಧಿ ನಗರದಲ್ಲಿರುವ ಸ್ವಾಮಿ ವಿವೇಕಾನಂದ ಈಜುಕೊಳ, ಕಳಸಾಪೂರ ರಸ್ತೆಯಲ್ಲಿರುವ ನಂದೀಶ್ವರ ನಗರದಲ್ಲಿನ ಈಜುಕೊಳ ಹಾಗೂ ವಸಂತಸಿಂಗ್ ಜಮಾದಾರ ನಗರದಲ್ಲಿನ ಈಜುಕೊಳಗಳಿಗೆ ಮಾರ್ಚ್ 29 ರಂದು ಒಂದು ದಿನ ಸಾರ್ವಜನಿಕ ರಜೆ ಘೋಷಿಸಲಾಗಿದೆ. ಸಾರ್ವಜನಿಕರು ಹಾಗೂ ಈಜುಪಟುಗಳು ಸಹಕರಿಸಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಗ್ನಿಬನ್ನಿರಾಯ ಜಯಂತಿ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಲೋಕಸಭೆ ಚುನಾವಣೆ-2024 ರ ನೀತಿ ಸಂಹಿತೆ ಹಿನ್ನಲೆಯಲ್ಲಿ ಶ್ರೀ ಅಗ್ನಿಬನ್ನಿರಾಯ ಜಯಂತಿಯನ್ನು ಮಾರ್ಚ್ 28 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಸರಳ ಹಾಗೂ ಸಾಂಕೇತಿಕವಾಗಿ ಆಚರಣೆ ಮಾಡಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಕ್ಷ್ಮೇಶ್ವರದಲ್ಲಿ ರಂಗಪಚಮಿ ಮಾ.29ಕ್ಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಟ್ಟಣದಲ್ಲಿ ಮಾ.29ರ ಶುಕ್ರವಾರ ರಂಗಪಂಚಮಿ ಆಚರಿಸಲು ನಿರ್ಣಯಿಸಲಾಗಿದೆ ಎಂದು ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ತಿಳಿಸಿದ್ದಾರೆ.

ಬಿಸಿಲಿನ ಪ್ರಮಾಣ ಹೆಚ್ಚಿರುವುದರಿಂದ ಬೆಳಿಗ್ಗೆ 8ರಿಂದ ಮಧ್ಯಾಹ್ನ 12 ಗಂಟೆಯೊಳಗೆ ಹಬ್ಬದ ಆಚರಣೆ ಪೂರ್ಣಗೊಳಿಸಿ ಆರೋಗ್ಯ ಕಾಪಾಡಿಕೊಳ್ಳಬೇಕು. ಅಲ್ಲದೆ, ತುಂಗಭದ್ರಾ ನದಿಯಲ್ಲಿ ನೀರು ಖಾಲಿಯಾಗಿದ್ದರಿಂದ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಿದೆ. ಬೋರ್‌ವೆಲ್‌ಗಳ ನೀರಿನ ಪ್ರಮಾಣದಲ್ಲೂ ಕೊರತೆ ಕಂಡು ಬರುತ್ತಿದೆ. ಸಾರ್ವಜನಿಕರು ನೀರನ್ನು ಹಿತ-ಮಿತವಾಗಿ ಬಳಸಲು ಮತ್ತು ಸಹಕರಿಸಲು ಮುಖ್ಯಾಧಿಕಾರಿ ಮನವಿ ಮಾಡಿದ್ದಾರೆ.

### ಜಿಲ್ಲಾಡಳಿತ ಭವನದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮದಲ್ಲಿ ನ್ಯಾ. ಬಸವರಾಜ

# ಗ್ರಾಹಕರಿಗೆ ನ್ಯಾಯ ಒದಗಿಸುವುದು ಆಯೋಗದ ಕರ್ತವ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಹಕರಿಗೆ ಅವರ ಹಕ್ಕು ಮತ್ತು ಜವಾಬ್ದಾರಿಗಳ ಕುರಿತು ಜನಜಾಗೃತಿ ಮೂಡಿಸುವುದು ವಿಶ್ವ ಗ್ರಾಹಕರ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ 'ಗ್ರಾಹಕರಿಗಾಗಿ ನ್ಯಾಯಯುತ ಮತ್ತು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ' ಎಂಬ ಘೋಷವಾಕ್ಯದಡಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಸಮಾಜದ ಕಟ್ಟಕಡೆಯ ವ್ಯಕ್ತಿಯಿಂದ ಹಿಡಿದು ರಾಷ್ಟ್ರಪತಿಯವರೆಗೆ ಪ್ರತಿಯೊಬ್ಬ ವ್ಯಕ್ತಿಯೂ ಒಂದಿಲ್ಲೊಂದು ರೀತಿಯಲ್ಲಿ ಗ್ರಾಹಕರಾಗಿರುತ್ತಾರೆ. ಇಂದಿನ ದಿನಮಾನಗಳಲ್ಲಿ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ( ಕೃತಕ ಬುದ್ಧಿಮತ್ತೆ) ಬಳಕೆಯಿಂದ ಸಾಮಾಜಿಕ ಜಾಲತಾಣಗಳಲ್ಲಿ ತಮಗೆ ಬೇಕಾಗುವಂತಹ ವಸ್ತುಗಳನ್ನು ಖರೀದಿ ಮಾಡಬೇಕಾಗುತ್ತದೆ. ಮೊಬೈಲ್ ಫೋನ್ ಕೂಡ ಕೃತಕ ಬುದ್ಧಿಮತ್ತೆಯ ಒಂದು ಭಾಗವಾಗಿದೆ. ಕೃತಕ ಬುದ್ಧಿಮತ್ತೆ ಸಹಾಯದಿಂದ ವೈದ್ಯಕೀಯ ಲೋಕದ ಸವಾಲುಗಳಿಗೆ ಪರಿಹಾರ, ಹವಾಗುಣ ಪರಿಸ್ಥಿತಿ, ರೂಟ್ ಮ್ಯಾಪ್ ಹೀಗೆ ಅನೇಕ ತರಹದ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳಬಹುದಾಗಿದೆ.

▶▶ 3ನೇ ಪುಟಕ್ಕೆ

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಆಯೋಗದ ಅಧ್ಯಕ್ಷ ರಾಚಪ್ಪ ಕೆ.ತಾಳಿಕೋಟಿ ಮಾತನಾಡಿ, ಈಗ ನಾವೆಲ್ಲ ಆರ್ಟಿಫಿಶಿಯಲ್ ಇಂಟಲಿಜೆನ್ಸಿಯಲ್ಲಿ ವ್ಯವಹರಿಸುತ್ತಿದ್ದೇವೆ. ಇದರಿಂದ ಕೆಲವೊಂದು ಸಾಧಕ-ಬಾಧಕಗಳಿವೆ. ಬ್ಯಾಂಕ್, ಇನ್ಸುರೆನ್ಸ್ ಕಂಪನಿಯಲ್ಲಿನ ಸೇವೆಗಳ ಕುರಿತು ಗ್ರಾಹಕರಿಗೆ ನ್ಯೂನತೆಗಳು ಕಂಡುಬಂದಲ್ಲಿ ಅಂತರ್ಜಾಲದ ಮೂಲಕ ಸಂದೇಶಗಳನ್ನು ರವಾನಿಸಿ ಅವುಗಳ ಪ್ರಿಂಟ್ ಕಾಪಿಯನ್ನು ಹಾಗೂ ಸೇವೆಗಳ ರಸೀದಿಯನ್ನು ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಹಾಜರುಪಡಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಮಾತನಾಡಿ, 1962ರ ಮಾರ್ಚ್ 15ರಂದು ಗ್ರಾಹಕರ ಹಕ್ಕುಗಳ ಬಗ್ಗೆ ಪ್ರಸಾಪವಾಯಿತು. 1986ರಲ್ಲಿ ಗ್ರಾಹಕರ ರಕ್ಷಣಾ ಕಾಯ್ದೆ ಜಾರಿಗೆ ಬಂದಿತು. 2019ರಲ್ಲಿ ಗ್ರಾಹಕರ ರಕ್ಷಣಾ ಕಾಯ್ದೆ ಹೊಸದಾಗಿ ಅಧಿನಿಯಮಗೊಳಿಸಲಾಯಿತು. ಗ್ರಾಹಕರಿಗೆ ವಸ್ತುಗಳನ್ನು ಖರೀದಿಸುವಾಗ ಆಯ್ಕೆ ಮಾಡುವ ಹಕ್ಕು, ಅವುಗಳ ಗುಣಮಟ್ಟಗಳ ಕುರಿತು ತಿಳಿಯುವ ಹಕ್ಕು ಹಾಗೂ ಮೋಸ ಹೋದರೆ ಪರಿಹಾರ ಪಡೆಯುವ ಹಕ್ಕು ಕೂಡ ಇರುತ್ತದೆ. ಈ ಹಕ್ಕುಗಳ ಕುರಿತು ಗ್ರಾಹಕರು ತಿಳುವಳಿಕೆ ಹೊಂದಬೇಕು ಎಂದು ವಿವರಿಸಿದರು.

### ಕಾಯಕ ಬಂಧುಗಳ, ಸ್ವಸಹಾಯ ಸಂಘಗಳ ಸದಸ್ಯರ, ಕೂಲಿಕಾರರ ಸಭೆಯಲ್ಲಿ ವಿ. ಎಸ್.ಸಜ್ಜನ

# ಗ್ರಾಮೀಣ ತಾರತಮ್ಯವಿಲ್ಲದಂತೆ ಕೆಲಸ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ರೋಣ

ಗ್ರಾಮೀಣ ಭಾಗದಲ್ಲಿ ಬೇಸಿಗೆ ಕಾಲದಲ್ಲಿ ಕೆಲಸವಿಲ್ಲದೇ ಗುಳೆ ಹೋಗುತ್ತಾರೆ. ಅದನ್ನು ತಪ್ಪಿಸಲು ನಿಮ್ಮೆಲ್ಲರ ಸಹಕಾರ ಬಹಳ ಮುಖ್ಯ. ಪ್ರತಿ ಮನೆಗೆ ಹೋಗಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ಏಪ್ರಿಲ್ 1ರಿಂದ ಸಮುದಾಯ ಕಾಮಗಾರಿ ಪ್ರಾರಂಭವಾಗುತ್ತದೆ ಎಂಬುದನ್ನು ಮನವರಿಕೆ ಮಾಡಿ, ಗುಳೇ ತಪ್ಪಿಸಿ ಎಂದು ಜಿಲ್ಲಾ ಮಾಹಿತಿ ಶಿಕ್ಷಣ, ಸಂವಹನ ಸಂಯೋಜಕರಾದ ವಿ.ಎಸ್. ಸಜ್ಜನ ಹೇಳಿದರು.

ರೋಣ ತಾಲೂಕಿನ ಸವಡಿ ಗ್ರಾಮ ಪಂಚಾಯತಿಯಲ್ಲಿ 'ವಲಸೆ ಯಾಕ್ರೀ ನಿಮ್ಮೂರಲ್ಲೇ ಉದ್ಯೋಗ ಖಾತ್ರಿ-ದುಡಿಮೆ ಖಾತ್ರಿ' ಅಭಿಯಾನದಡಿ ಕಾಯಕ ಬಂಧುಗಳ, ಸ್ವಸಹಾಯ ಸಂಘಗಳ ಸದಸ್ಯರ, ಕೂಲಿಕಾರರ ಸಭೆಯಲ್ಲಿ ಅವರು ಮಾತನಾಡಿದರು.

ಏಪ್ರಿಲ್ 1ರಿಂದ ನಿಮ್ಮ ಗ್ರಾಮದಲ್ಲಿ ಸಮುದಾಯ ಕಾಮಗಾರಿ ಪ್ರಾರಂಭಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಈಗಾಗಲೇ ಎಲ್ಲಾ ಗ್ರಾ.ಪಂ ಅಧಿಕಾರಿಗಳಿಗೆ ಜಿ.ಪಂ ಸಿಇಓ ಅವರು ತಿಳಿಸಿದ್ದಾರೆ. ಹಾಗಾಗಿ, ಪ್ರತಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕೆಲಸ ಪ್ರಾರಂಭವಾಗುತ್ತದೆ. ಕಾಯಕ ಬಂಧುಗಳಾದ ತಾವೆಲ್ಲರೂ ಕೂಲಿಕಾರರ ಆರ್ಥಿಕ ಸಬಲತೆಗಾಗಿ ದುಡಿಯಬೇಕು. ಬಂಧು ಅಂದರೆ ಜನರಿಗೆ ಹತ್ತಿರ ಇದ್ದವರು ಎಂದರ್ಥ. ದುಡಿಯುವ ವರ್ಗಕ್ಕೆ ಹತ್ತಿರ ಇರುವ ತಮಗೆ ಕಾಯಕ ಬಂಧುಗಳು ಎನ್ನಲಾಗುತ್ತದೆ.



ಕಡ್ಡಾಯವಾಗಿ ಈಬಾರಿ ಗ್ರಾಮ ಪಂಚಾಯಿತಿಯಿಂದ ನೋಂದಾಯಿಸಲ್ಪಟ್ಟ ಕುಟುಂಬಗಳಲ್ಲಿ ನರೇಗಾ ಯೋಜನೆಯಡಿ ಸಕ್ರಿಯವಲ್ಲದೆ ಇರುವವರನ್ನು ಗುರುತಿಸಿ ಸದರಿಯವರನ್ನು ಪಾಲ್ಗೊಳ್ಳುವಂತೆ ಮಾಡಲು ಮನೆ ಮನೆಗೆ ತೆರಳಿ ಯೋಜನೆಯಡಿ ದೊರೆಯುವ ಸೌಲಭ್ಯಗಳ ಬಗ್ಗೆ ಅರಿವು ಮೂಡಿಸುವಂತೆ ತಿಳಿಸಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ ಶ್ರಿಂಗೇರಿ, ತಾಲೂಕಾ ಮಾಹಿತಿ ಶಿಕ್ಷಣ & ಸಂವಹನ ಸಂಯೋಜಕ ಮಂಜುನಾಥ, ಬಿಎಫ್‌ಟಿ ಈರಣ್ಣ ಬೆಲೇರಿ, ಜಿಕೆಎಮ್ ಚಾಂದಬಿ ಕರ್ನಾಚಿ, ಗ್ರಾ.ಪಂ ಸದಸ್ಯರು, ಕಾಯಕ ಬಂಧುಗಳು ಹಾಗೂ ಸಿಬ್ಬಂದಿಗಳು ಇದ್ದರು.

ಕೆಲಸದ ಸ್ಥಳದಲ್ಲಿ ನೀರು, ನೆರಳು ಸೇರಿದಂತೆ ಮಕ್ಕಳಿಗಾಗಿಯೇ ಗ್ರಾಮದಲ್ಲಿ ಕೂಸಿನ ಮನೆ ಸಹ ತೆರಯಲಾಗಿದ್ದು, ಪಾಲಕರು ಮಕ್ಕಳನ್ನು ಅಲ್ಲಿ ಬಿಟ್ಟು ಹೋಗಬೇಕು. ಅದನ್ನು ನೀವು ಜನರಿಗೆ ತಿಳಿಸಬೇಕು. ಮುಖ್ಯವಾಗಿ, ಕೆಲಸಕ್ಕೆ ಬಂದವರಿಗೆ ಅಳತೆ ತಕ್ಕ ಹಾಗೆ ಕಡೆಯುವದು ಕಡ್ಡಾಯ. ತಾರತಮ್ಯವಿಲ್ಲದಂತೆ ಕೆಲಸ ಮಾಡುವದು ತಮ್ಮ ಕರ್ತವ್ಯ ಎಂದು ವಿ.ಎಸ್. ಸಜ್ಜನ ತಿಳಿಸಿದರು.

### ಗ್ರಾಮೀಣ ಭಾಗದಲ್ಲಿ ಕಾಂಗ್ರೆಸ್ ಮತಯಾಚನೆ । ಅವಳಿ ನಗರದಲ್ಲಿ ಬಿಜೆಪಿ ಸಂಚಲನ

# ಗರಿಗೆದರಿದ ಚುನಾವಣಾ ಕಣ



■ ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಲೋಕಸಭೆ ಕ್ಷೇತ್ರದ ಚುನಾವಣಾ ಅಖಾಡ ನಿಧಾನವಾಗಿ ರಂಗೇರತೊಡಗಿದೆ. ಬುಧವಾರ ಒಂದೇ ದಿನ ಕಾಂಗ್ರೆಸ್ ಮತ್ತು ಬಿಜೆಪಿ ಅಭ್ಯರ್ಥಿಗಳು ಇಡೀ ದಿನ ಮತಬೇಟೆಯಲ್ಲಿ ನಿರತರಾಗಿದ್ದರು. ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಅವಳಿ ನಗರದ ಮಠ, ದೇವಸ್ಥಾನಗಳಿಗೆ ಭೇಟಿ ನೀಡಿದರಲ್ಲದೆ, ಸಭೆ ನಡೆಸಿ ಮತ ಯಾಚಿಸಿದರು.

ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪ್ರಚಾರ ಸಭೆಯೊಂದಿಗೆ ಗಂಗಾಪುರ ಪೇಟೆಯಲ್ಲಿರುವ ದುರ್ಗಾದೇವಿ ದೇವಸ್ಥಾನ, ವೀರೇಶ್ವರ ಪುಣ್ಯಾಶ್ರಮ, ತೋಂಟದಾರ್ಯ ಮಠಕ್ಕೆ ಭೇಟಿ ನೀಡಿದರು. ಜಿಲ್ಲಾ ಬಿಜೆಪಿ ಕಚೇರಿ, ಜಿಲ್ಲಾ ವಕೀಲರ ಸಂಘ, ಶಿವರತ್ನ ಪ್ಯಾಲೇಸ್‌ನಲ್ಲಿ ಮಾಜಿ ಸೈನಿಕರು, ಬೆಟಗೇರಿ ಶರಣಬಸವೇಶ್ವರ ನಗರದಲ್ಲಿ ಹಡಪದ ಅಪ್ಪಣ್ಣ ಸಮಾಜ, ಲಯನ್ಸ್ ಕ್ಲಬ್ ಹಾಲ್‌ನಲ್ಲಿ ನಿವೃತ್ತ ನೌಕರರು, ಸಂಭಾಪುರ ರಸ್ತೆಯ ಶಂಕರ ಮಠದಲ್ಲಿ ಬ್ರಾಹ್ಮಣ ಸಮಾಜ ಹಾಗೂ ಎಪಿಎಂಸಿ ವರ್ತಕರನ್ನು ಭೇಟಿ ಮಾಡಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ, ವಿ.ಪ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಸೇರಿದಂತೆ ಅನೇಕ ಬಿಜೆಪಿ ನಾಯಕರು ಜೊತೆಗಿದ್ದರು.

ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಗದಗ ತಾಲೂಕಿನ ನಾಗಾವಿ ಗ್ರಾ.ಪಂ ವ್ಯಾಪ್ತಿಯ ಕಾಂಗ್ರೆಸ್ ಮುಖಂಡರು ಮತ್ತು ಕಾರ್ಯಕರ್ತರೊಂದಿಗೆ ಸಭೆ ನಡೆಸಿದರು. ನಂತರ ಸೊರಟೂರ, ಹರ್ತಿ, ಮುಳಗುಂದ, ಹುಲಕೋಟಿ ಹಾಗೂ ಬಿಂಕದಕಟ್ಟಿ ಗ್ರಾಮದಲ್ಲಿ ಸಭೆ ನಡೆಸಿ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗದಗ ಜಿಲ್ಲೆಯ ಮತದಾರರು ಕಾಂಗ್ರೆಸ್ ಪರವಾಗಿದ್ದಾರೆ. ಪ್ರಚಾರಕ್ಕೆ ಹೋದ ಸಂದರ್ಭದಲ್ಲಿ ಮತದಾರರು ತೋರುವ ಪ್ರೀತಿ-ವಿಶ್ವಾಸ ನೋಡಿದರೆ, ಗೆಲುವು ನಿಶ್ಚಿತ ಎನ್ನುವ ವಾತಾವರಣ ಇದೆ. ಏನೇ ಆದರೂ ಎದುರಾಳಿ ಅಭ್ಯರ್ಥಿಯನ್ನು ಗೌರವದಿಂದ ಕಾಣುತ್ತೇನೆ ಎಂದರು.

ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ವಾಸಣ್ಣ ಕುರುಡಗಿ ಮುಂತಾದವರು ಜೊತೆಗಿದ್ದರು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ, ಗದುಗಿನಲ್ಲಿ ಬಿಜೆಪಿ ಬೆಂಬಲಿಗರು ದೊಡ್ಡ ಸಂಖ್ಯೆಯಲ್ಲಿದ್ದಾರೆ. ಆ ಮತದಾರರನ್ನು ಸೆಳೆಯುವ ಪ್ರಯತ್ನ ಮಾಡಿದ್ದೇವೆ. ಈ ಬಾರಿ ಗದಗ ಜಿಲ್ಲೆಯಿಂದ ಬಿಜೆಪಿ ಅಭ್ಯರ್ಥಿಗೆ ಹೆಚ್ಚಿನ ಮತಗಳು ಬರುವ ವಿಶ್ವಾಸವಿದೆ. ಗದಗ ಕ್ಷೇತ್ರದ ಬಿಜೆಪಿ ಮುಖಂಡ ಅನಿಲ ಮೆಣಸಿನಕಾಯಿ ಬಿಜೆಪಿಯೊಂದಿಗಿದ್ದಾರೆ. ಶೀಘ್ರವೇ ಅವರೂ ಪ್ರಚಾರ ನಡೆಸಲಿದ್ದಾರೆ ಎಂದರು.

## ಪ್ರಗತಿ ಪರಿಶೀಲನೆ ಸಭೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ಅಧ್ಯಕ್ಷತೆಯಲ್ಲಿ ಎಸ್ ಸಿಪಿ/ಟಿಎಸ್‌ಪಿ ಪ್ರಗತಿ ಪರಿಶೀಲನೆ ಹಾಗೂ ಪ.ಜಾ/ ಪ.ವರ್ಗದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರ ಣ ಸಮಿತಿ ಸಭೆ ಜರುಗಿದವು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಸುರೇಖಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಪ್ರಶಾಂತ ವರಗಪ್ಪನವರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಪತ್ರಕರ್ತ ಮೊಹರೆ ಹಣಮಂತರಾಯ ದತ್ತಿ ಉಪನ್ಯಾಸ ಇಂದು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಹಿರಿಯ ಪತ್ರಕರ್ತ ದಿ. ಮೊಹರೆ ಹಣಮಂತರಾಯ ದತ್ತಿ ಉಪನ್ಯಾಸ ಕಾರ್ಯಕ್ರಮ ಮಾರ್ಚ್ 28ರಂದು ಮಧ್ಯಾಹ್ನ 12 ಗಂಟೆಗೆ ಕವಿವಿ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಭಾಂಗಣದಲ್ಲಿ ಜರುಗಲಿದೆ.

ಮುಖ್ಯ ಅತಿಥಿಗಳಾಗಿ ಸಂಯುಕ್ತ ಕರ್ನಾಟಕ ದಿನಪತ್ರಿಕೆ ಹುಬ್ಬಳ್ಳಿ ಸ್ಥಾನಿಕ ಸಂಪಾದಕ ಷಣ್ಮುಖ ಕೋಳಿವಾಡ ಆಗಮಿಸಿ 'ಸಾಮಾಜಿಕ ಬದಲಾವಣೆಯಲ್ಲಿ ಪತ್ರಿಕೆಗಳ ಪಾತ್ರ' ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ. ಕುಲಸಚಿವ ಡಾ. ಎ.ಚೆನ್ನಪ್ಪ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

## ಸಂಪಾದಕೀಯ

# ಮಠಾಧೀಶರ ಮಾತಿಗೆ ಸಿಗುತ್ತಾ ಮನ್ನಣೆ

ಲೋಕಸಭೆ ಚುನಾವಣೆಗೆ ದಿನಗಣನೆ ಆರಂಭವಾಗಿರುವ ಬೆನ್ನಲ್ಲೆ ಚುನಾವಣಾ ಕಣ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಸದ್ಯ ಶಿವಮೊಗ್ಗ, ಉತ್ತರ ಕನ್ನಡ, ಮೈಸೂರು ಹೀಗೆ ಪ್ರತಿಯೊಂದು ಕ್ಷೇತ್ರದಲ್ಲಿ ಬಿಜೆಪಿ ಮತ್ತು ಕಾಂಗ್ರೆಸ್ಸಿಗೆ ಹೊಸ ಹೊಸ ಸವಾಲುಗಳು ಮತ್ತು ಅವಕಾಶಗಳು ಒದಗಿ ಬರುತ್ತಿವೆ.

ಈಗ ಅಂಥದ್ದೆ ಒಂದು ಕ್ಷೇತ್ರ ರಾಜ್ಯದ ಗಮನ ಸೆಳೆಯುತ್ತಿದೆ. ಅದು ಧಾರವಾಡ ಲೋಕಸಭಾ ಕ್ಷೇತ್ರ. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಪ್ರತಿನಿಧಿಸುವ ಈ ಧಾರವಾಡ ಕ್ಷೇತ್ರದ ಲಿಂಗಾಯತ ಮಠಾಧೀಶರು ಬಂಡಾಯ ಸಾರಿದ್ದಾರೆ. ದಿಂಗಾಲೇಶ್ವರ ಸ್ವಾಮೀಜಿ ಬಹಿರಂಗವಾಗಿಯೇ ಪ್ರಹ್ಲಾದ ಜೋಶಿ ವಿರುದ್ಧ ಆರೋಪ ಮಾಡುತ್ತಿದ್ದಾರೆ.

ಮುಖ್ಯವಾಗಿ ಲಿಂಗಾಯತ ಸಮುದಾಯದ ನಾಯಕ ಬಿ.ಎಸ್. ಯಡಿಯೂರಪ್ಪ ಮುಖ್ಯಮಂತ್ರಿ ಹುದ್ದೆಯಿಂದ ಕೆಳಗಿಳಿಯಲು ಪ್ರಹ್ಲಾದ್ ಜೋಶಿ ಕಾರಣ. ಸಿಎಂ ಸ್ಥಾನದಲ್ಲಿ ಕುಳಿತುಕೊಳ್ಳಲು ಜೋಶಿ ಜಾಕೆಟ್ ಹೊಲಿಸಿಕೊಂಡಿದ್ದರು. ಆದರೆ ಲಿಂಗಾಯತ ಮಠಾಧೀಶರು ಹೋರಾಟ ನಡೆಸಿದ್ದರಿಂದ ಜೋಶಿ ಹೊಲಿಸಿದ ಜಾಕೆಟ್ ಪಾಕೇಟ್ ಸೇರಿದೆ ಎನ್ನುವ ವ್ಯಂಗ್ಯದ ಮಾತುಗಳು ರಣಕಣದ ಚಿತ್ರಣವನ್ನೆ ಬದಲಿಸಿದೆ.

ಪ್ರಹ್ಲಾದ್ ಜೋಶಿ ಲಿಂಗಾಯತ ವಿರೋಧಿ ನಾಯಕ ಎಂದು ಶ್ರೀಗಳು ಆರೋಪ ಮಾಡಿದ್ದಾರೆ. ಹೀಗಾಗಿ ಮಾರ್ಚ್ 31ರ ಒಳಗಾಗಿ ಅಭ್ಯರ್ಥಿಯನ್ನು ಬದಲಾವಣೆ ಮಾಡಬೇಕು. ಇಲ್ಲದಿದ್ದರೆ ಸ್ವತಂತ್ರವಾಗಿ ಸ್ಪರ್ಧಿಸುವ ಬಗ್ಗೆ ಚಿಂತನೆ ನಡೆಸುವುದಾಗಿ ಎಚ್ಚರಿಕೆ ನೀಡಿರುವುದು ಬಿಜೆಪಿಯಲ್ಲಿ ಸಂಚಲನ ಸೃಷ್ಟಿಸಿದೆ.

ರಾಜ್ಯದಲ್ಲಿ ಬಿಜೆಪಿ ಅಧಿಕಾರಕ್ಕೆ ಬರಲು ಲಿಂಗಾಯತ ಸಮುದಾಯದ ಕೊಡುಗೆ ಅಪಾರವಾಗಿದೆ. ಲಿಂಗಾಯತ ಸಮುದಾಯಕ್ಕೆ ಸೇರಿದ ಯಡಿಯೂರಪ್ಪ ಪಕ್ಷ ಸಂಘಟನೆಯೂ ಮುಖ್ಯ ಕಾರಣ. ಅನೇಕ ಲಿಂಗಾಯತ ನಾಯಕರಿಗೆ ಮಠಾಧೀಶರು ಪರೋಕ್ಷ ಬೆಂಬಲ ಸೂಚಿಸಿದ್ದು ಕಾರಣವೇ.

ಈ ಎಲ್ಲ ಕಾರಣಗಳಿಗಾಗಿ ಲಿಂಗಾಯತ ಮಠಾಧೀಶರು ಬಿಜೆಪಿ ಮುಖಂಡರ ಮೇಲೆ ಒಂದು ಹಂತದ ಹಿಡಿತ ಇಟ್ಟುಕೊಂಡಿದ್ದಾರೆ. ಉತ್ತರ ಕರ್ನಾಟಕದ ಅನೇಕ ಮಠಾಧೀಶರು ಲಿಂಗಾಯತ ಓಟ್ ಬ್ಯಾಂಕ್ ಹೊಂದಿದ್ದಾರೆ. ಸಹಜವಾಗಿ ಯಾವುದೇ ಪಕ್ಷ ಮಠಾಧೀಶರ ಕೋರಿಕೆಯನ್ನು ಲಘುವಾಗಿ ಪರಿಗಣಿಸುವುದಿಲ್ಲ.

ಆದರೆ ಜೋಶಿ ವಿಷಯದಲ್ಲಿ ಪಕ್ಷ ಯಾವ ತೀರ್ಮಾನ ತೆಗೆದುಕೊಳ್ಳುತ್ತದೆ ಎನ್ನುವುದು ಕುತೂಹಲಕ್ಕೆ ಕಾರಣವಾಗಿದೆ. ಈಗಾಗಲೇ ಬಿ.ಎಸ್. ಯಡಿಯೂರಪ್ಪ ಈ ವಿಷಯವಾಗಿ ಸ್ಪಷ್ಟನೆ ನೀಡಿದ್ದು, ಯಾವುದೇ ಕಾರಣಕ್ಕೂ ಪ್ರಹ್ಲಾದ್ ಜೋಶಿ ಬದಲಾಯಿಸುವುದಿಲ್ಲ ಎಂದಿದ್ದಾರೆ. ಒಂದೆಡೆ ಮಠಾಧೀಶರು ಪಟ್ಟು ಸಡಿಲಿಸಿಲ್ಲ, ಪಕ್ಷವೂ ಮಠಾಧೀಶರ ಕೋರಿಕೆಗೆ ಸೊಪ್ಪು ಹಾಕಿಲ್ಲ. ಮುಂದಿನ ಬೆಳವಣಿಗೆ ಮಾತ್ರ ಕುತೂಹಲ ಮೂಡಿಸಿದೆ.

# ನಿಗದಿತ ಅವಧಿಯಲ್ಲಿ ಮಾಹಿತಿ ಸಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ಭಾರತ ಚುನಾವಣಾ ಆಯೋಗವು ಲೋಕಸಭಾ ಸಾರ್ವತ್ರಿಕ ಚುನಾವಣೆ-2024ರ ವೇಳಾಪಟ್ಟಿಯನ್ನು ಘೋಷಿಸಿದ್ದು, ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುತ್ತದೆ. ಚುನಾವಣಾ ಆಯೋಗ ಮತ್ತು ಮುಖ್ಯ ಚುನಾವಣಾಧಿಕಾರಿಗಳು, ಬೆಂಗಳೂರು ಇವರು ಕಾಲಕಾಲಕ್ಕೆ ನೀಡುವ ನಿರ್ದೇಶನಗಳಂತೆ ಚುನಾವಣಾ ಕಾರ್ಯಗಳನ್ನು ಕೈಗೊಂಡು ನಿಗದಿತ ಅವಧಿಯಲ್ಲಿ ಚುನಾವಣಾ ಮಾಹಿತಿಯನ್ನು ಆದ್ಯತೆ ಮೇರೆಗೆ ಚುನಾವಣಾ ಆಯೋಗಕ್ಕೆ ಸಲ್ಲಿಸುವುದು ಅವಶ್ಯವಿರುತ್ತದೆ.

ಈಗಾಗಲೇ ಸಾಕಷ್ಟು ಬಾರಿ ಈ ಕುರಿತು ತಿಳಿಸಿದಾಗ್ಯೂ ಸಹ ಕೆಲ ಅಧಿಕಾರಿಗಳು ವಿಡಿಯೋ ಸಂವಾದ, ಸಭೆಗೆ ಹಾಜರಾಗಲು ತಿಳಿಸಿದ ವೇಳೆಯಲ್ಲಿ ಹಾಜರಾಗದೇ ಗೈರು ಉಳಿಯುತಿದ್ದು, ಮೊಬೈಲ್ ಸಂಪರ್ಕ, ವಾಟ್ಸ್‌ಆಪ್ ಸಂದೇಶ ಹಾಗೂ ಕಚೇರಿ ದೂರವಾಣಿಯ ಸಂಪರ್ಕಕ್ಕೂ ಕೆಲವು ಅಧಿಕಾರಿಗಳು ಯಾವುದೇ ರೀತಿಯಲ್ಲಿ ಸ್ಪಂದಿಸಿರುವುದಿಲ್ಲ.

ಧಾರವಾಡ ಲೋಕಸಭಾ 11ನೇ ಮತಕ್ಷೇತ್ರಕ್ಕೆ ಸಂಬಂಧಿಸಿದಂತೆ ನಿಯೋಜನೆಗೊಂಡಿರುವ ಎಲ್ಲ ಅಧಿಕಾರಿಗಳು ಚುನಾವಣಾ ಕರ್ತವ್ಯ ಪೂರ್ಣಗೊಳ್ಳುವವರೆಗೆ ಎಲ್ಲ ಸಮಯದಲ್ಲಿಯೂ ಮೊಬೈಲ್ ಸಂಪರ್ಕ, ವಾಟ್ಸ್‌ಆಪ್ ಸಂದೇಶ ಹಾಗೂ ಕಚೇರಿ ದೂರವಾಣಿಯ ಸಂಪರ್ಕದಲ್ಲಿ ಲಭ್ಯವಿದ್ದು, ಕಾರ್ಯಾಲಯದಿಂದ ಚುನಾವಣೆಗೆ ಸಂಬಂಧಿಸಿದಂತೆ ಕೋರುವ ಮಾಹಿತಿಯನ್ನು ಆದ್ಯತೆ ಮೇರೆಗೆ ತಯಾರಿಸಿ, ಯಾವುದೇ ವಿಳಂಬಕ್ಕೆ ಆಸ್ಪದ ನೀಡದೆ ಕೋರಿರುವ ಮಾಹಿತಿಯನ್ನು ತುರ್ತು ಸಲ್ಲಿಸಲು ಅಗತ್ಯ ಕ್ರಮವಹಿಸಿ ಚುನಾವಣೆಯನ್ನು ಶಾಂತಿ ಹಾಗೂ ಸುವ್ಯವಸ್ಥೆಯಿಂದ ಜರುಗಿಸಿ ಯಶಸ್ವಿಗೊಳಿಸಲು ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

## ರಾಜ್ಯ ಸರಕಾರಿ ನೌಕರ ಸಂಘದ ಧಾರವಾಡ ಘಟಕದಿಂದ ಹೋಳಿ ಸಂಭ್ರಮ

# ಹೋಳಿ ಹಬ್ಬ ಹೊಸತನದ ಸಂಕೇತ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಹೋಳಿ ಹಬ್ಬ ಬಣ್ಣದ ಸಂಕೇತ ಮಾತ್ರವಲ್ಲ, ಅದು ಬದುಕಿಗೆ ಬಣ್ಣ ತುಂಬಿ ಸಂತೋಷ ಮೂಡಿಸುವ ಹಬ್ಬವಾಗಿದೆ. ಪ್ರತಿಯೊಬ್ಬರಲ್ಲಿ ಇರುವ ಕೆಟ್ಟದನ್ನು ಕಳೆದು, ಒಳ್ಳೆಯದನ್ನು ಪಡೆದುಕೊಳ್ಳುವ ಸಂದರ್ಭವಾಗಿದೆ ಎಂದು ಧಾರವಾಡ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಧಾರವಾಡ ಜಿಲ್ಲಾ ಘಟಕ ಆಯೋಜಿಸಿದ್ದ ಹೋಳಿ ಹಬ್ಬದ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಭಾರತೀಯರ ಪ್ರತಿ ಹಬ್ಬಗಳಿಗೂ ಒಂದು ಐತಿಹಾಸಿಕ ಕಾರಣ, ಹಿನ್ನೋಟ, ಮುನ್ನೋಟಗಳಿವೆ. ಕಾಮದಹನ ಕೆಟ್ಟದನ್ನು ಸುಡುವ ಪ್ರತೀಕ. ಬಣ್ಣ ಹಚ್ಚಿಕೊಳ್ಳುವುದು ಉತ್ತಮ ಗುಣಗಳೊಂದಿಗೆ ಹೊಸ ಭವಿಷ್ಯ ಕಟ್ಟಿಕೊಳ್ಳುವ ಪ್ರತೀಕವಾಗಿದೆ. ಹೋಳಿ ಹಬ್ಬವನ್ನು ದೇಶದ ನಾನಾ ಭಾಗಗಳಲ್ಲಿ ವಿವಿಧ ರೀತಿಯಲ್ಲಿ ಆಚರಿಸುತ್ತಾರೆ. ಆದರೆ ಉತ್ತರ ಕರ್ನಾಟಕದ ಹೋಳಿ ಆಚರಣೆ ವಿಶೇಷ ಮತ್ತು ವಿಶಿಷ್ಟವಾಗಿದೆ ಎಂದು ಅವರು ಹೇಳಿದರು.

ಹಬ್ಬಗಳನ್ನು ಉತ್ತರ ಕರ್ನಾಟಕ ಭಾಗದಲ್ಲಿ ವೈಭವ ಮತ್ತು ಅರ್ಥಪೂರ್ಣವಾಗಿ ಆಚರಿಸುತ್ತಾರೆ. ಆಚರಣೆಗಳಿಗೆ ಸಂಸ್ಕೃತಿ, ಸಂಸ್ಕಾರಗಳ ಹಿನ್ನೆಲೆ ಇರುತ್ತದೆ. ಇಂದು ಜರುಗಿದ ಹೋಳಿ ಹಾಡು, ಹಾಸ್ಯ ಕಾರ್ಯಕ್ರಮಗಳು ನೀತಿ ಪಾಠವಾಗಿದ್ದವು ಎಂದರು.



ರಾಜ್ಯ ಸರಕಾರ ಜಿಲ್ಲೆಯನ್ನು ಸಂಪೂರ್ಣ ಬರಪೀಡಿತ ಜಿಲ್ಲೆ ಎಂದು ಘೋಷಿಸಿದೆ ಮತ್ತು ಲೋಕಸಭೆ ಸಾರ್ವತ್ರಿಕ ಚುನಾವಣೆ ಪ್ರಕಟವಾಗಿದೆ. ಇಂತ ಕಾರ್ಯಗಳ ಒತ್ತಡದ ಮಧ್ಯದಲ್ಲಿಯೂ ಜಿಲ್ಲೆಯ ನೌಕರರು ಉತ್ತಮ ರೀತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂದು ಅವರು ಶ್ಲಾಘಿಸಿದರು.

ಧಾರವಾಡ ಜಿಲ್ಲಾಡಳಿತದ ವಿವಿಧ ಅಧಿಕಾರಿಗಳು ಪರಸ್ಪರ ಬಣ್ಣಗಳನ್ನು ಎರಚಿ ಹೋಳಿ ಆಚರಣೆಯಲ್ಲಿ ಪಾಲ್ಗೊಂಡು ಸಂಭ್ರಮಿಸಿದರು. ನೌಕರರ ಸಂಘದ ಜಿಲ್ಲಾಧ್ಯಕ್ಷ ಎಸ್.ಎಫ್. ಸಿದ್ದನಗೌಡರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಮಂಜುನಾಥ ಯಡಹಳ್ಳಿ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಖಜಾಂಚಿ ರಾಜಶೇಖರ ಬಾಣದ ವಂದಿಸಿದರು.

ಧಾರವಾಡ ನಗರದ ಕರ್ನಾಟಕ ರಾಜ್ಯ ನೌಕರರ ಸಂಘದ ಆವರಣದಲ್ಲಿ ಜರುಗಿದ ಹೋಳಿ ಹಬ್ಬದಲ್ಲಿ ಜಿಲ್ಲಾದಿಕಾರಿ ದಿವ್ಯ ಪ್ರಭು ಅವರೊಂದಿಗೆ ಜಿಲ್ಲಾ ಆರೋಗ್ಯ ಅಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಆರ್.ಸಿ.ಎಚ್.ಓ ಅಧಿಕಾರಿ ಡಾ. ಸುಜಾತಾ ಹಸವಿಮಠ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಪದ್ಮಾವತಿ, ಜಿಲ್ಲಾ ನಿರೂಪಣಾಧಿಕಾರಿ ಅಂಗಡಿ, ನೌಕರ ಸಂಘದ ರಾಜ್ಯ ಪರಿಷತ್ ಸದಸ್ಯ ದೇವಿದಾಸ ಶಾಂತಿಕರ, ಗೌರವಾಧ್ಯಕ್ಷ ರಮೇಶ ಲಿಂಗದಾಳ, ಹಿರಿಯ ಉಪಾಧ್ಯಕ್ಷ ಮಲ್ಲಿಕಾರ್ಜುನ ಸೊಲಗಿ, ಸಂಘಟನಾ ಕಾರ್ಯದರ್ಶಿ ಸುಜಾತಾ ಬಡ್ಡಿ, ಪದಾಧಿಕಾರಿಗಳಾದ ಚಂದ್ರಿಕಾ ಡಮ್ಮಳ್ಳಿ, ಪುಷ್ಪಾವತಿ ಮೇದಾರ ಸೇರಿದಂತೆ ಜಿಲ್ಲೆಯ ವಿವಿಧ ಸಂಘಟನೆಗಳ ಪದಾಧಿಕಾರಿಗಳು, ನೌಕರರು, ನೌಕರರ ಕುಟುಂಬ ಸದಸ್ಯರು ಸೇರಿದಂತೆ ಹಲವರು ಭಾಗವಹಿಸಿ, ಪರಸ್ಪರ ಬಣ್ಣ ಹಚ್ಚಿ, ಹೋಳಿ ಹಬ್ಬ ಆಚರಣೆ ಮಾಡಿದರು.

ಜಾನಪದ ಕಲಾ ತಂಡಗಳಾದ ಸ್ನೇಹ ರಂಗ ಕಲಾ ಬಳಗ ಮತ್ತು ಸಿರಿಗಂಧ ಕಲಾ ತಂಡಗಳು ಜಾನಪದ ಗೀತೆ ಹಾಗೂ ಹೋಳಿ ಹಬ್ಬದ ಹಾಡುಗಳನ್ನು ಹಾಗೂ ಹಾಸ್ಯ ಕಲಾವಿದ ಮಹಾದೇವ ಸತ್ತಿಗೇರಿ ಅವರು ಹಾಸ್ಯಮಯ ಪ್ರಸಂಗಗಳನ್ನು ಪ್ರಸ್ತುತಪಡಿಸಿ ನೆರೆದವರನ್ನು ರಂಜಿಸಿದರು.

## ನೂರಾರು ವಸತಿ ರಹಿತ, ಸ್ಲಂ ನಿವಾಸಿಗಳಿಂದ ಎಚ್ಚರಿಕೆ

# ವಸತಿ ಸೌಲಭ್ಯ ಕಲ್ಪಿಸದಿದ್ದರೆ ಚುನಾವಣೆ ಬಹಿಷ್ಕಾರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದ ನೂರಾರು ವಸತಿರಹಿತ ಕುಟುಂಬಗಳಿಗೆ ಜನಪ್ರತಿನಿಧಿಗಳು ಮತ್ತು ಜಿಲ್ಲಾಡಳಿತ ಮನೆಗಳನ್ನು ಹಂಚಿಕೆ ಮಾಡುವುದನ್ನು ಬಿಟ್ಟು ಸುಳ್ಳು ಭರವಸೆಗಳನ್ನು ನೀಡುತ್ತ ಬಂದಿದ್ದಾರೆ. ಕೂಡಲೇ ವಸತಿ ಸೌಲಭ್ಯ ಕಲ್ಪಿಸದಿದ್ದರೆ ನಗರದ ನೂರಾರು ವಸತಿರಹಿತ ಕುಟುಂಬಗಳಿಂದ ಮತ್ತು ಸ್ಲಂ ನಿವಾಸಿಗಳಿಂದ ಮುಂಬರುವ ಲೋಕಸಭಾ ಚುನಾವಣೆಯನ್ನು ಬಹಿಷ್ಕಾರ ಹಾಕಲಾಗುವುದು ಎಂದು ಎಚ್ಚರಿಸಿದರು.

ಇತ್ತೀಚೆಗೆ ಗದಗ ಜಿಲ್ಲಾ ಸ್ಲಂ ಸಮಿತಿಯ ನೇತೃತ್ವದಲ್ಲಿ ಕರೆದಿದ್ದ ಸಭೆಯಲ್ಲಿ ಈ ತೀರ್ಮಾನ ಕೈಗೊಂಡರು. ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಆರ್. ಮಾನ್ವಿ ಮಾತನಾಡಿ, ವಸತಿ ಸೌಲಭ್ಯ ಕಲ್ಪಸಲು ನಿರ್ಲಕ್ಷ್ಯ ಮತ್ತು ತಾರತಮ್ಯ ನೀತಿಯನ್ನು ಅನುಸರಿಸುತ್ತಿದ್ದಾರೆ. ಚುನಾವಣೆ ಪ್ರಚಾರದ ವೇಳೆ ಪ್ರತಿ ಬಾರಿ ವಸತಿರಹಿತ ಕುಟುಂಬಗಳಿಗೆ ಮನೆ ಹಂಚಿಕೆ ಮಾಡುತ್ತೇವೆ ಮತ್ತು ಸ್ಲಂ ನಿವಾಸಿಗಳ ಬೇಡಿಕೆಗಳಿಗೆ ಪ್ರಾಮಾಣಿಕವಾಗಿ ಸ್ಪಂದಿಸಲಾಗುವುದೆಂದು ಭರವಸೆಗಳನ್ನು ನೀಡುತ್ತ ಬಂದಿದ್ದಾರೆ. ಆದರೆ ಈವರೆಗೂ ಮನೆಗಳನ್ನು ಹಂಚಿಕೆಗೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಆರೋಪಿಸಿದರು.



ಇನ್ನಾದರೂ ನಮ್ಮ ಬೇಡಿಕೆಗಳಿಗೆ ಸ್ಪಂದಿಸದಿದ್ದರೆ ಗದಗ-ಬೆಟಗೇರಿ ನಗರದ ನೂರಾರು ವಸತಿರಹಿತ ಕುಟುಂಬಗಳು ಈ ಬಾರಿಯ ಲೋಕಸಭಾ ಚುನಾವಣೆ ಬಹಿಷ್ಕಾರ ಮಾಡಲು ನಿರ್ಧರಿಸಿದ್ದು ನಗರದ ನೂರಾರು ಸ್ಲಂ ನಿವಾಸಿಗಳು ಇದಕ್ಕೆ ಬೆಂಬಲವನ್ನು ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಸ್ಲಂ ಸಮಿತಿ ಕಾರ್ಯದರ್ಶಿ ಅಶೋಕ ಕುಸಬಿ ಮಾತನಾಡಿದರು.

ಈ ಸಂದರ್ಭದಲ್ಲಿ ಸ್ಲಂ ಸಮಿತಿ ಪದಾಧಿಕಾರಿಗಳಾದ ರವಿಕುಮಾರ ಬೆಳಮಕರ, ಅಶೋಕ ಕುಸಬಿ, ಸಮಿತಿ ಇಬ್ರಾಹಿಮ ಮುಲ್ಲಾ, ಮಕ್ತುಮಸಾಬ ಮುಲ್ಲಾನವರ, ಶಿವಾನಂದ ಶಿಗ್ಲಿ, ಮೆಹರುನಿಸಾ ಢಾಲಾಯತ, ಸಲೀಮ ಬೈರಕದಾರ, ದುರ್ಗಪ್ಪ ಮಣ್ಣವಡ್ಡರ, ಮೆಹರುನಿಸಾ ಡಂಬಳ, ಮಂಜುನಾಥ ಶ್ರೀಗಿರಿ, ರೇವಣಪ್ಪ ಲಕ್ಕುಂಡಿ, ದಾವಲಬಿ ಕೌತಾಳ, ಮಲೇಶಪ್ಪ ಕಲಾಲ, ವಿಶಾಲಕ್ಷಿ ಹಿರೇಗೌಡ್ರ, ಮೈಮುನ ಬೈರಕದಾರ, ಮೆಹಬೂಬಸಾಬ ಬಳ್ಳಾರಿ, ನಜಮುನಿಸಾ ಮುರಗೋಡ, ಪ್ರೇಮಾ ಚಿಂಚಲಿ, ಬಸವರಾಜ ಅಗಸಿಕೇರಿ ಮುಂತಾದವರಿದ್ದರು.



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ ತಗ್ಗಿನಕೇರಿ ಓಣಿಯಲ್ಲಿನ ಶ್ರೀ ಜಗದ್ಗುರು ರೇಣುಕಾಚಾರ್ಯ ದೇವಾಲಯದಲ್ಲಿ ಶ್ರೀ ರೇಣುಕಾಚಾರ್ಯ ಜಯಂತ್ಯುತ್ಸವದ ಅಂಗವಾಗಿ, ಮೂರ್ತಿಗೆ ಅರ್ಚಕ ಮಲ್ಲಯ್ಯಸ್ವಾಮಿ ಗಚ್ಚಿನಮಠ ರುದ್ರಾಭಿಷೇಕ ನೆರವೇರಿಸಿದರು. ನಂತರ ಶ್ರೀಮಠದ ಸದ್ಭಕ್ತರಾದ ಜೋಳದ, ಕೊಟಗಿ ಮನೆತನದವರಿಂದ ಅನ್ನಪ್ರಸಾದ ನೆರವೇರಿತು. ನಿವೃತ್ತ ಶಿಕ್ಷಕ ಎಮ್.ಎ. ಹಿರೆವಡಯರ, ಡಾ. ಆರ್. ಕೆ. ಗಚ್ಚಿನಮಠ, ಅಂದಾನಯ್ಯ ಮಾಲಗಿತ್ತಿಮಠ, ಬಸನಗೌಡ ಪಾಟೀಲ, ಶಂಕ್ರಗೌಡ ಅಯ್ಯನಗೌಡ್ರ, ಪ್ರಶಾಂತ ಹಿರೇಮಠ ಮುಂತಾದವರಿದ್ದರು.



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಧಾರವಾಡದ ತಾವರಗೇರಿ ಹೆರಿಗೆ ಆಸ್ಪತ್ರೆ ಬಳಿಯ ಮೊಕಾಶಿ ಕಂಪೌಂಡ್‌ನಲ್ಲಿ ಮಂಗಳವಾರ ಮಕ್ಕಳು ಮತ್ತು ಮಹಿಳೆಯರು ಪರಸ್ಪರ ಬಣ್ಣವೆರಚುವ ಮೂಲಕ ಹೋಳಿ ಹಬ್ಬವನ್ನಾಚರಿಸಿ ಸಂಭ್ರಮಿಸಿದರು.

## ಡಾ. ಗುರುಲಿಂಗ ಕಾಪಸೆ ನಿಧನಕ್ಕೆ ತೋಂಟದ ಶ್ರೀ ಶೋಕ

# ಅನುಭಾವ ಪರಂಪರೆಯ ಉಜ್ವಲ ನಕ್ಷತ್ರ

■ ವಿಜಯಸಾಕ್ಷಿ ಸುದ್ದಿ, ಗದಗ

ಆಧುನಿಕ ದಿನಮಾನದ ಅಪೂರ್ವ ಅನುಭಾವಿ, ಅರವಿಂದರ ಪೂರ್ಣಯೋಗ ಹಾಗೂ ಶರಣರ ಶಿವಯೋಗದ ಸಮನ್ವಯಿಯಾಗಿದ್ದ ಡಾ. ಗುರುಲಿಂಗ ಕಾಪಸೆ ಅವರು ಲಿಂಗೈಕ್ಯರಾದುದು ಅನುಭಾವ ಪರಂಪರೆಯ ಉಜ್ವಲ ನಕ್ಷತ್ರವೊಂದು ಕಣ್ಮರೆಯಾದಂತಾಗಿದೆ ಎಂದು ಡಂಬಳ-ಗದಗ ಜಗದ್ಗುರು ತೋಂಟದಾರ್ಯ ಸಂಸ್ಥಾನಮಠದ ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

ಪೂರ್ಣಯೋಗದ ಸಾಧಕರಾಗಿ ಮಧುರಚೆನ್ನರ ಪ್ರಭಾವದಲ್ಲಿ ಬೆಳೆದುಬಂದ ಡಾ. ಕಾಪಸೆ ಶಿವಶರಣರ ವಚನ ಸಾಹಿತ್ಯವನ್ನು ಆಳವಾಗಿ ಅಧ್ಯಯನಿಸಿದ್ದರು. ಶರಣರ ಅನುಭಾವ ಕುರಿತು ಉದ್ಗ್ರಂಥಗಳನ್ನು ರಚಿಸುವ ಮೂಲಕ ಕನ್ನಡ ಸಾಹಿತ್ಯ ಪ್ರಪಂಚವನ್ನು ಶ್ರೀಮಂತಗೊಳಿಸಿದ ಹಿರಿಮೆ ಅವರದಾಗಿತ್ತು. ನಮ್ಮ ಶ್ರೀಮಠದ ಜೊತೆಗೆ ಅವಿನಾಭಾವ ಸಂಬಂಧ ಹೊಂದಿದ್ದರು. ಇಂತಹ ಅಮೃತಪುತ್ರರ ಅಗಲುವಿಕೆಯಿಂದ ನಮ್ಮ ನಾಡು ಬಡವಾದಂತಾಗಿದೆ.

ಡಾ. ಗುರುಲಿಂಗ ಕಾಪಸೆ ಅವರು ಪ್ರಾಥಮಿಕ ಹಂತದಿಂದ ಸ್ನಾತಕೋತ್ತರ ಹಂತದವರೆಗಿನ ಎಲ್ಲ ವಿದ್ಯಾರ್ಥಿಗಳಿಗೆ ಪಾಠ-ಪ್ರವಚನ ಮಾಡಿದ ಆದರ್ಶ ಪ್ರಾಧ್ಯಾಪಕರಾಗಿದ್ದರು. ಕರ್ನಾಟಕ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಪ್ರಾಧ್ಯಾಪಕರಾಗಿ ಬೆಳಗಾವಿಯ ರಾಣಿಚೆನ್ನಮ್ಮ ಸ್ನಾತಕೋತ್ತರ ಕೇಂದ್ರದ ಆಡಳಿತಾಧಿಕಾರಿಯಾಗಿ ಸ್ಮರಣೀಯ ಸೇವೆ ಸಲ್ಲಿಸಿದ್ದರು. ಹಲವಾರು ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿದ್ದ ಡಾ. ಕಾಪಸೆ, ಕರ್ನಾಟಕ ಸಾಹಿತ್ಯ ಅಕಾಡೆಮಿಯ ಗೌರವಾನ್ವಿತ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದರು.



ಕೇಂದ್ರ ಸಾಹಿತ್ಯ ಅಕಾಡೆಮಿ, ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಮುಂತಾದ ಪುರಸ್ಕಾರಗಳಿಗೆ ಭಾಜನರಾಗಿದ್ದ ಅವರು, ಕನ್ನಡ ಸಾಹಿತ್ಯದ ಭೀಷ್ಮರೆಂದೇ ಪ್ರಕೀರ್ತಿತರಾಗಿದ್ದರು.

ಅಪರೂಪದ ಸಂತ, ಅವಿರಳ ಜ್ಞಾನಿಯಾಗಿದ್ದ ಅವರು ನಾವೆಂದೂ ಮರೆಯಲಾಗದ ಧೀಮಂತ ವ್ಯಕ್ತಿ ಎಂದು ಶ್ರೀಗಳು ಸ್ಮರಿಸಿ, ಅವರಿಗೆ ಭಾವಪೂರ್ಣ ಶ್ರದ್ಧಾಸುಮನಗಳನ್ನು ಸಮರ್ಪಿಸಿದ್ದಾರೆ.

# ಅಕ್ಷರ ಟೆಕ್ನೊ ಶಾಲೆಯಲ್ಲಿ ಗುಬ್ಬಚ್ಚಿ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಶಹರ ವಲಯದ ಅಕ್ಷರ ಟೆಕ್ನೊ ಶಾಲೆಯಲ್ಲಿ ಇತ್ತೀಚೆಗೆ ವಿಶ್ವ ಗುಬ್ಬಚ್ಚಿ ದಿನವನ್ನು ಆಚರಿಸಲಾಯಿತು. ಗುಬ್ಬಚ್ಚಿ ಚಿಕ್ಕ ಪಕ್ಷಿಯಾದರೂ, ಪರಿಸರ ಸಮತೋಲನಕ್ಕೆ ಅತ್ಯವಶ್ಯ. 'ಗುಬ್ಬಚ್ಚಿಯನ್ನು ಪ್ರೇಮಿಸೋಣ' ಎಂಬ ಘೋಷವಾಕ್ಯದೊಂದಿಗೆ, ಬೊಂಬಿನಲ್ಲಿ ತಯಾರಿಸಿದ ಗುಬ್ಬಚ್ಚಿ ಗೂಡನ್ನು ವಿತರಿಸುವ ಮೂಲಕ ಕಾರ್ಯಕ್ರಮವನ್ನು ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಲೆಯ ಸಂಸ್ಥಾಪಕ ವಿಜಯಕುಮಾರ್ ಹಾಲಮಠ ವಹಿಸಿದ್ದರು. ಈ ಮುಖ್ಯ ಅತಿಥಿಗಳಾಗಿ ಗದಗ ಲಯನ್ಸ್ ಕ್ಲಬ್‌ನ ಅಧ್ಯಕ್ಷ ರಮೇಶ ಶಿಗ್ಲಿ, ಪಕ್ಷಿ ತಜ್ಞ ಕಿರಣ್ ಕಮ್ಮಾರ, ಕ್ಷೇತ್ರ ಸಂಪನ್ಮೂಲ ವ್ಯಕ್ತಿಗಳಾದ ಪ್ರಕಾಶ ಮಂಗಳೂರು, ಧನಲಕ್ಷ್ಮೀ ಹಾಲಮಠ, ಲಯನ್ಸ್ ಕ್ಲಬ್‌ನ ಮಹಿಳಾ ಅಧ್ಯಕ್ಷರು, ಪದಾಧಿಕಾರಿಗಳು, ಶಾಲೆಯ ಮುಖ್ಯೋಪಾಧ್ಯಾಯರು, ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ಗ್ರಾಹಕರಿಗೆ ನ್ಯಾಯ ಒದಗಿಸುವುದು ಆಯೋಗದ ಕರ್ತವ್ಯ

▸▸ ಮೊದಲನೇ ಪುಟದಿಂದ

ಗ್ರಾಹಕರು ಸಾಮಾಜಿಕ ಜಾಲತಾಣದಲ್ಲಿ, ಆನ್‌ಲೈನ್ ಮುಖಾಂತರ ಯಾವುದಾದರೂ ವಸ್ತುಗಳನ್ನು ಖರೀದಿ ಮಾಡಿದ್ದರೆ ಅಂತಹ ಸರಕುಗಳಲ್ಲಿ ಲೋಪದೋಷಗಳು ಕಂಡುಬಂದರೆ ಅಥವಾ ಸರಬರಾಜುದಾರರು ತಪ್ಪು ಮಾಹಿತಿ ಕೊಟ್ಟಿದ್ದರೆ ಆಗ ಅವರು ಶಿಕ್ಷೆಗೆ ಒಳಗಾಗುತ್ತಾರೆ. ಕಾರಣ, ಗ್ರಾಹಕರು ಇಂದಿನ ತಂತ್ರಜ್ಞಾನದ ತಿಳುವಳಿಕೆ ಹೊಂದುವುದು ಹಾಗೂ ಬಳಕೆ ಮಾಡುವುದು ಸಹ ಅಗತ್ಯವಾಗಿದೆ. ಯಾವುದೇ ಲಿಂಗಬೇಧವಿಲ್ಲದೇ ಸಮಾನವಾಗಿ ಹಾಗೂ ಜವಾಬ್ದಾರಿಯುತವಾಗಿ ಗ್ರಾಹಕರಿಗೆ ನ್ಯಾಯ ಒದಗಿಸುವುದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಾರ್ಯವಾಗಿದೆ. ಸಾಮಾಜಿಕ ಜವಾಬ್ದಾರಿ ಅರಿತು ಉತ್ಪಾದನೆ ಮತ್ತು ಮಾರಾಟ ಮಾಡುವುದು ಇಂದಿನ ಅಗತ್ಯವಾಗಿದೆ ಎಂದರು.

ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ ಮಾತನಾಡಿ, ಗ್ರಾಹಕರಿಗೆ ವಸ್ತುಗಳನ್ನು ಖರೀದಿಸಿದಾಗ ಮೋಸವಾದಲ್ಲಿ ಆಯೋಗದಿಂದ ಪರಿಹಾರ ಕಂಡುಕೊಳ್ಳಬಹುದಾಗಿದೆ. ಆದರೆ ಗ್ರಾಹಕರು ಮಾರಾಟಗಾರರ ಮೇಲೆ ವೃಥಾ ಸುಳ್ಳು ಆರೋಪಗಳನ್ನು ಮಾಡಬಾರದು. ನ್ಯಾಯಯುತವಾಗಿ ವರ್ತಿಸಬೇಕಾಗುತ್ತದೆ ಎಂದು ವಿವರಿಸಿದರು.

ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಯಶೋಧಾ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ವಿಶ್ವ ಗ್ರಾಹಕರ ದಿನಾಚರಣೆ ನಿಮಿತ್ತ ಏರ್ಪಡಿಸಿದ್ದ ವಸ್ತು ಪ್ರದರ್ಶನ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯ ರಾಜು ನಾಮದೇವ ಮೇತ್ರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿ ಪಾಟೀಲ, ಎಲ್.ಪಿ.ಜಿ ವ್ಯವಸ್ಥಾಪಕರು, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಎಸ್.ಬಿ. ಪೂಜಾರಿ, ವಿವಿಧ ಇಲಾಖೆ ಅಧಿಕಾರಿಗಳು, ನ್ಯಾಯಬೆಲೆ ಅಂಗಡಿಕಾರರು, ಪದವಿಪೂರ್ವ ಮತ್ತು ಪದವಿ ವಿದ್ಯಾರ್ಥಿಗಳು ಹಾಜರಿದ್ದರು.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಡಾ.ಹಂಪಣ್ಣ ಸಜ್ಜನ ಸ್ವಾಗತಿಸಿದರು. ಆಹಾರ ಸುರಕ್ಷತಾ ಅಧಿಕಾರಿ ಡಾ. ರಾಜೇಂದ್ರ ಗಡಾದ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

### ಜಕ್ಕಲಿಯಲ್ಲಿ ಸುರೇಶ ಕುಲಕರ್ಣಿಯವರ ಸಹಕಾರದಿಂದ ಜೀರ್ಣೋದ್ಧಾರಗೊಂಡ ಮಂದಿರ

# ವೆಂಕಟೇಶ್ವರ ದೇವಸ್ಥಾನದ ಕಳಸಾರೋಹಣ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದ ಶ್ರೀ ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನದ ಕಳಸಾರೋಹಣ ಮತ್ತು ನೂತನವಾಗಿ ಜೀರ್ಣೋದ್ಧಾರಗೊಂಡ ದೇವಸ್ಥಾನದ ಲೋಕಾರ್ಪಣೆ ಸಮಾರಂಭವು ಮಂಗಳವಾರ ಅತ್ಯಂತ ಸಡಗರ ಸಂಭ್ರಮದಿಂದ ಜರುಗಿದವು.

ಬೆಳಿಗ್ಗೆ ನವಗ್ರಹ ಸಹಿತ ಲಕ್ಷ್ಮೀ ನಾರಾಯಣ ಹೋಮದೊಂದಿಗೆ ಧಾರ್ಮಿಕ ಕಾರ್ಯಗಳು ಪ್ರಾರಂಭಗೊಂಡವು. ಕಳಸಾರೋಹಣಕ್ಕೂ ಮುನ್ನ ಗ್ರಾಮದ ಶ್ರೀ ಹನುಮಂತ ದೇವಸ್ಥಾನದಿಂದ ವೆಂಕಟೇಶ್ವರ ದೇವಸ್ಥಾನದವರೆಗೆ ಕಳಸವನ್ನು ಮೆರವಣಿಗೆಯಲ್ಲಿ ಪೂರ್ಣ ಕುಂಭದೊಂದಿಗೆ ತರಲಾಯಿತು. ಈ ಎಲ್ಲ ಧಾರ್ಮಿಕ ಕಾರ್ಯಗಳ ನೇತೃತ್ವವನ್ನು ಬಳೂಟಗಿಯ ವೆಂಕಟೇಶಾಚಾರ್ ವಹಿಸಿಕೊಂಡಿದ್ದರು.

ಕಲಿಯುಗದಲ್ಲಿ ಇಂತಹ ಧಾರ್ಮಿಕ ಕಾರ್ಯಗಳ ಆಚರಣೆಯಿಂದ ಭಗವಂತನ ಒಲುಮೆ ಸಾಧ್ಯವಿದೆ. ಇಂತಹ ಮಹತ್ಕಾರ್ಯವನ್ನು ಮಾಡಿದ ಸುರೇಶ ಕುಲಕರ್ಣಿ ಮತ್ತು ದೇವಸ್ಥಾನದ ಜೋಷಿ ಬಂಧುಗಳಿಗೂ ಅನಂತ ಕೃತಜ್ಞತೆಗಳು ಸಮರ್ಪಿತವಾಗುತ್ತವೆ ಎಂದು ವೆಂಕಟೇಶಾಚಾರ್ ಹೇಳಿದರು.

ಜಕ್ಕಲಿಯ ಜೋಷಿ ಮನತೆನದವರಾದ ನರಸಿಂಹಾಚಾರ್, ಕೃಷ್ಣಾಚಾರ್, ಗೋವಿಂದಾಚಾರ್ ಲಕ್ಷ್ಮೀಬಾಯಿ, ಅಂಬಾಬಾಯಿ, ರಂಗಾಚಾರ್ ಮುಂತಾದವರು ಪ್ರತಿ ವರ್ಷವೂ ಶ್ರೀ ವೆಂಕಟೇಶನ ದರುಶನಕ್ಕೆ ತಿರುಪತಿಗೆ ಹೋಗಿ ಬರುತ್ತಿದ್ದರು. ಕಾಡು-ಮೇಡು ಅಲೆದು ಶ್ರೀ ವೆಂಕಟೇಶ್ವರನ ದರುಶನ ಪಡೆದು ಬರುವುದು ಸಾಹಸದ ಕೆಲಸವೇ ಆಗಿತ್ತು.




> 1984ರಲ್ಲಿ ನಿರ್ಮಾಣಗೊಂಡ ದೇವಸ್ಥಾನ ಕಾಲನ ಹೊಡೆತಕ್ಕೆ ಸಿಕ್ಕು ಜರ್ಜರಿತವಾಗಿತ್ತು. ಆಗ ಜಕ್ಕಲಿಯವರೇ ಆದ ಸುರೇಶ ಕುಲಕರ್ಣಿ ಈ ದೇವಸ್ಥಾನದ ಜೀರ್ಣೋದ್ಧಾರದ ಬಗ್ಗೆ ನಮ್ಮೊಂದಿಗೆ ಚರ್ಚಿಸಿ ಜೀರ್ಣೋದ್ಧಾರ ಕಾರ್ಯಕ್ಕೆ ಮುಂದಾದರು. ದೇವಸ್ಥಾನದ ನೂತನ ರೂಪವನ್ನು ಕಂಡು ಆನಂದವಾಗಿದೆ.
>
> **– ಶ್ರೀನಿವಾಸ ವೆಂಕಣ್ಣಾಚಾರ್ ಜೋಷಿ,** ಜಕ್ಕಲಿ.

ಸರಿಸುಮಾರು ಎರಡು ಶತಮಾನಗಳ ಹಿಂದೆ ಹೀಗೇ ತಿರುಪತಿಗೆ ಹೋಗಿ ಬರುವಾಗ ಮನೆಯ ಹಿರಿಯರಾದ ನರಸಿಂಹಾಚಾರ ವೆಂಕಟೇಶನಲ್ಲಿ, ಸ್ವಾಮೀ! ಇಷ್ಟು ದಿನ ನಮ್ಮ ಮೈಯಲ್ಲಿ ಶಕ್ತಿ ಇತ್ತು.

> ಒಂದಿನ ನಮ್ಮ ಬಂಧುಗಳೊಂದಿಗೆ ಇದೇ ದೇವಸ್ಥಾನದಲ್ಲಿ ಊಟಕ್ಕೆ ಕುಳಿತಿದ್ದೆವು. ಆ ಸಮಯದಲ್ಲಿ ಜೋರಾಗಿ ಮಳೆ ಸುರಿದು ಕಾರ್ಯಕ್ಕೆ ಅಡ್ಡಿಯಾಯಿತು. ಅಂದೇ ನಾನು ಈ ದೇವಸ್ಥಾನವನ್ನು ಜೀರ್ಣೋದ್ಧಾರ ಮಾಡಬೇಕೆಂದುಕೊಂಡೆ. ಸ್ವಪ್ನದಲ್ಲಿ ಸ್ವಾಮಿಯು ಬಂದು ನೀನು ಕೆಲಸವನ್ನು ಪ್ರಾರಂಭಿಸು, ಎಲ್ಲವೂ ಒಳ್ಳೆಯದಾಗುತ್ತದೆ ಎಂದು ಹೇಳಿದಂತಾಯಿತು. ಮರುದಿನ ಜೋಷಿಯವರನ್ನು ಭೇಟಿಯಾಗಿ ವಿಷಯ ತಿಳಿಸಿ ಒಪ್ಪಿಗೆ ಕೇಳಿದೆ. ಅವರೂ ತಕ್ಷಣ ಒಪ್ಪಿಗೆ ನೀಡಿ, ಜೋಷಿ ಬಂಧುಗಳು ಮತ್ತು ಕುಲಕರ್ಣಿ ಬಂಧುಗಳು ಆರ್ಥಿಕ ನೆರವನ್ನೂ ನೀಡಿದರು. ಇದೆಲ್ಲವೂ ಸ್ವಾಮಿಯ ಕೃಪೆಯಿಂದ ಆದದ್ದು.
>
> **–ಸುರೇಶ ಕುಲಕರ್ಣಿ.** ದೇವಸ್ಥಾನದ ಜೀರ್ಣೋದ್ಧಾರಕ.

ಹೇಗೋ ನಿನ್ನ ಸನ್ನಿಧಿಗೆ ಬಂದು ಹೋಗುತ್ತಿದ್ದೆವು. ಆದರೆ ಈಗ ನಮಗೂ ವಯಸ್ಸಾಗುತ್ತ ಬಂತು. ಮುಂದಿನ ಸಾರೆ ನಮಗೆ ನಿನ್ನ ಸನ್ನಿಧಿಗೆ ಬರಲು ಆಗುತ್ತದೆಯೋ ಇಲ್ಲವೋ. ಅದಕ್ಕಾಗಿ ಭಕ್ತ ವತ್ಸಲನೆಂಬ ಹೆಸರು ಪಡೆದಿರುವ ನೀನೇ ಯಾಕೆ ಇಲ್ಲಿಗೆ ಬಂದಿರಬಾರದು? ಎಂದು ಬೇಡಿಕೊಂಡರು.

ದಾರಿ ಮಧ್ಯದಲ್ಲಿ ಬೇಡಿಕೊಂಡ ಅವರ ಬೇಡಿಕೆ ಊರು ಸಮೀಪಿಸುತ್ತಿದ್ದ ಹಾಗೆ ಪೂರ್ಣಗೊಂಡಿತು. ಇವರು ಯಾತ್ರೆಗೆಂದು ಹೊತ್ತೊಯ್ದಿದ್ದ ಜೋಳಿಗೆಯಲ್ಲಿ ದಾರಿ ಮಧ್ಯದ ಉಪಹಾರಕ್ಕೆಂದು ಇರಿಸಿಕೊಂಡಿದ್ದ ಒಂದು ಅರಳು ಹಿಟ್ಟಿನ ಗಂಟಿತ್ತು. ಅದು ಊರು ಸಮೀಪಿಸದಂತೆ



ಭಾರವಾಗತೊಡಗಿತು. ಗಂಟನ್ನು ಹೊತ್ತಿದ್ದವರು ಅಚ್ಚರಿಪಟ್ಟರು. ಈವರೆಗೆ ಹಗುರವಾಗಿದ್ದ ಈ ಗಂಟು ಇಷ್ಟೊಂದು ಭಾರವಾಗುತ್ತಿದೆಯಲ್ಲ ಎನ್ನುತ್ತ ಮನೆಗೆ ಬಂದು ಬಿಚ್ಚಿ ನೋಡಿದರೆ ಅದರಲ್ಲಿ ಕರಿ ಶಿಲೆಯ ವೆಂಕಟೇಶನ ಮೂರ್ತಿಯಿತ್ತು.

ನಂತರ, ಊರ ಮಧ್ಯದಲ್ಲಿನ ದಿಬ್ಬದಲ್ಲಿ ಪ್ರತಿಷ್ಠಾಪಿಸಿ ಚಿಕ್ಕದೊಂದು ಗುಡಿ ನಿರ್ಮಿಸಿ ಪೂಜಿಸತೊಡಗಿದರು. ಮೊದಲು ಕೇವಲ ಒಂದು ಚೋಟಿನಷ್ಟು ಅಳತೆಯಿದ್ದ ವೆಂಕಟೇಶ ದಿನಗಳೆದಂತೆ ಬೆಳೆಯುತ್ತ ಬಂದ.

ಈಗ ಶ್ರೀ ವೆಂಕಟೇಶನ ಎತ್ತರ ಏನಿಲ್ಲವೆಂದರೂ ಮೂರು-ಮೂರುವರೆ ಅಡಿಯವರೆಗಿದೆ. ಇದು ಭಗವಂತನ ಪವಾಡವಲ್ಲದೆ ಇನ್ನೇನು ಎನ್ನುತ್ತಾರೆ ಸಂಗಮೇಶ ಮೆಣಸಿಗಿ ಮತ್ತು ಜಕ್ಕಲಿಯ ಗ್ರಾಮಸ್ಥರು.

## ಅರುಣೋದಯ ಶಾಲೆಯಲ್ಲಿ ಸರಸ್ವತಿ ಪೂಜೆ




■ ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಸೇವಾ ಭಾರತಿ ಟ್ರಸ್ಟ್‌ನ ಅರುಣೋದಯ ವಿಶೇಷ ಅಗತ್ಯತೆಯುಳ್ಳ ಮಕ್ಕಳ ಶಾಲೆಯಲ್ಲಿ ಮಂಗಳವಾರ ಮಹಾಸರಸ್ವತಿ ಪೂಜಾ ಸಮಾರಂಭವನ್ನು ಏರ್ಪಡಿಸಲಾಗಿತ್ತು.

ಶಾಲಾ ಆಡಳಿತ ಮಂಡಳಿಯ ಉಪಾಧ್ಯಕ್ಷ ಲುಕ್ಕಣಸಾ ರಾಜೋಳಿ, ಕಾರ್ಯದರ್ಶಿ ಜಯರಾಜ ಮುಳಗುಂದ, ಕೋಶಾಧ್ಯಕ್ಷ ಜಿತೇಂದ್ರ ಶಹಾ, ಸದಸ್ಯರಾದ ಬಸವರಾಜ ಪಟ್ಟಣಶೆಟ್ಟಿ ಪೂಜಾ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.

ಪೂಜಾ ಸಮಾರಂಭದಲ್ಲಿ ಪಾಲ್ಗೊಂಡಿದ್ದ ಎಲ್ಲ ಮಕ್ಕಳಿಗೆ ಹಣ್ಣು-ಹಂಪಲು, ಸಿಹಿ ತಿಂಡಿಗಳನ್ನು ವಿತರಿಸಿ ಶುಭ ಕೋರಲಾಯಿತು. ಶಾಲಾ ಮುಖ್ಯೋಪಾಧ್ಯಾಯ ಸೇರಿದಂತೆ ಶಾಲೆಯ ಶಿಕ್ಷಕರು, ಸಿಬ್ಬಂದಿ ವರ್ಗ, ಪಾಲಕ-ಪೋಷಕರು ಉಪಸ್ಥಿತರಿದ್ದರು.

## ದಾಖಲೆ ಇಲ್ಲದ ರೂ.4,97,600 ನಗದು ವಶಕ್ಕೆ



■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಾರ್ಚ್ 25ರ ರಾತ್ರಿ 11.34 ಗಂಟೆಯ ಸುಮಾರಿಗೆ ತೇಗೂರ ಚೆಕ್ ಪೋಸ್ಟ್‌ನಲ್ಲಿ ಕೆಎಸ್‌ಆರ್‌ಟಿಸಿ ಬಸ್ ತಪಾಸಣೆ ಮಾಡಿದಾಗ ದಾಖಲೆ ಇಲ್ಲದ 4,97,600 ರೂ ನಗದು ಹಣ ಪತ್ತೆಯಾಗಿದ್ದು, ಹಣ ವಶಕ್ಕೆ ಪಡೆದು ಸೂಕ್ತ ಕ್ರಮ ಜರುಗಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಿಪ್ಪಾಣಿಯಿಂದ ಭದ್ರಾವತಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಕೆಎ-14, ಎಫ್-0083 ಅನ್ನು ನಿಲ್ಲಿಸಿ, ತೇಗೂರ ಚೆಕ್ ಪೋಸ್ಟ್‌ನಲ್ಲಿ ಎಸ್‌ಎಸ್‌ಟಿ ಮತ್ತು ಎಫ್‌ಎಸ್‌ಟಿ ತಂಡದ ಅಧಿಕಾರಿಗಳು ತಪಾಸಣೆ ಮಾಡಿದಾಗ ಚಿಕ್ಕಮಂಗಳೂರಿನ ಮಸೂದ್ ಎಂಬ ವ್ಯಕ್ತಿ ಬಳಿ ಸೂಕ್ತ ದಾಖಲೆಗಳಿಲ್ಲದ 4,97,600 ರೂ ಹಣ ಪತ್ತೆ ಆಗಿತ್ತು. ವಿಚಾರಣೆ ನಂತರ ಹಣವನ್ನು ವಶಕ್ಕೆ ಪಡೆದು ಜಿಲ್ಲಾ ಖಜಾನೆಯಲ್ಲಿ ಠೇವಣಿ ಮಾಡಲಾಗಿದೆ.

ಜಿಲ್ಲಾ ಎಂಸಿಸಿ ನೋಡಲ್ ಅಧಿಕಾರಿ ಮೋನಾ ರಾವುತ ಮಾರ್ಗದರ್ಶನದಲ್ಲಿ ಎಸಿ ಶಾಲಂ ಹುಸೇನ್, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ, ಎಂಸಿಸಿ ಅಧಿಕಾರಿ ಶಿವಪುತ್ರಪ್ಪ ಹೊಸಮನಿ, ಮ್ಯಾಜಿಸ್ಟ್ರೇಟ್‌ಗಳಾದ ಪ್ರವೀಣ ಶಿಂಧೆ, ಮಂಜುನಾಥ ಹಿರೇಮಠ ಕ್ರಮವಹಿಸಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



■ ವಿಜಯಸಾಕ್ಷಿ ಸುದ್ದಿ, ರೋಣ

ರೋಣ ತಾಲೂಕಿನ ಸವಡಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಮನರೇಗಾ ಯೋಜನೆಯ ಕಾಯಕ ಬಂಧುಗಳ ಸಭೆಯ ನಂತರ ಮತದಾನ ಪ್ರತಿಜ್ಞಾವಿಧಿ ಭೋದಿಸಲಾಯಿತು. PDO, DIEC, IEC, BFT, GKM ಸೇರಿದಂತೆ ಕಾಯಕ ಬಂಧುಗಳು ಹಾಗೂ ಗ್ರಾಮ ಪಂಚಾಯತ್ ಸದಸ್ಯರು ಸೇರಿದಂತೆ ಗ್ರಾಮ ಪಂಚಾಯತ್ ಸಿಬ್ಬಂದಿಗಳು ಹಾಜರಿದ್ದರು.

### ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಸದಸ್ಯರ ಕ್ರೀಡಾಕೂಟ

# ಮನೋಲ್ಲಾಸ ಕ್ರೀಡೆಗಳಿಂದ ಮನೋಬಲ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇತ್ತೀಚೆಗೆ ಮಹಿಳೆಯರು ಕೌಟುಂಬಿಕ ಕಾರ್ಯಚಟುವಟಿಕೆಗಳಿಗೆ ಸೀಮಿತವಾಗಿರದೆ ಕಲೆ, ಸಾಹಿತ್ಯ, ವಿಜ್ಞಾನ, ರಕ್ಷಣೆ, ಕ್ರೀಡೆ, ಉದ್ದಿಮೆಗಳಂತಹ ಹತ್ತು ಹಲವಾರು ಕ್ಷೇತ್ರಗಳಲ್ಲಿ ಸಾಧಿಸಿದ್ದಾರೆ. ಈ ಎಲ್ಲ ಸಾಧನೆಗಳನ್ನು ಸಾಧಿಸಲು ಅವರಲ್ಲಿ ದೈಹಿಕ ಸಾಮರ್ಥ್ಯ ಜೊತೆಗೆ ಮನೋಬಲವೂ ಬೇಕು. ಮನೋಲ್ಲಾಸ ಕ್ರೀಡೆಗಳು ದೈಹಿಕ ಮತ್ತು ಮಾನಸಿಕ ಸಾಮರ್ಥ್ಯ ಹೆಚ್ಚಿಸುವವು ಎಂದು ಡಿ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕಿ ಡಾ. ಸುವರ್ಣಾ ನಿಡಗುಂದಿ ತಿಳಿಸಿದರು.

ಎಸ್‌ವಾಯ್‌ಬಿಎಂಎಸ್ ಯೋಗ ಪಾಠಶಾಲೆಯ ಅಕ್ಕಮಹಾದೇವಿ




ಯೋಗ ವಿಜ್ಞಾನ ಕೇಂದ್ರದಲ್ಲಿ ಸಂಸ್ಥೆಯ 15ನೇ ವಾರ್ಷಿಕೋತ್ಸವದ ಅಂಗವಾಗಿ ಸದಸ್ಯರಿಗಾಗಿ ಏರ್ಪಡಿಸಿದ್ದ ಕ್ರೀಡಾಕೂಟದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರವು ಪ್ರಸ್ತುತ ದಿನಮಾನದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವಂತೆ ನಡಿಗೆ, ಯೋಗಾಸನ, ಲಗೋರಿ, ಆಶುಭಾಷಣ ಇನ್ನಿತರೆ ಕ್ರೀಡಾ ಸ್ಪರ್ಧೆಗಳನ್ನು ಆಯೋಜಿಸಿರುವುದು ಶ್ಲಾಘನೀಯ. ಮಹಿಳೆ ಮನೆಯಿಂದ ಹೊರಬಂದು ಸಮಾಜದಲ್ಲಿ ಬೆರೆಯಲು ಮಹಿಳಾ ಸಂಘಟನೆಗಳು ಶ್ರಮಿಸಬೇಕೆಂದು ಸೂಚಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಮುಖ್ಯೋಪಾಧ್ಯಾಯ ಶಿವನಗೌಡ ಗೌಡರ ಮಾತನಾಡಿ, ಪ್ರಾಚೀನ ಕಾಲದಲ್ಲಿ ಮೈತ್ರೇಯಿ, ಗಾರ್ಗಿ, ಅನಸೂಯ, ಈಚೆಗೆ ಅಕ್ಕಮಹಾದೇವಿ, ಮದರ್ ಥೇರೆಸಾ, ಕಲ್ಪನಾ ಚಾವ್ಲಾ, ಸುನಿತಾ ವಿಲಿಯಮ್ಸ್ ಮುಂತಾದ ಮಹಿಳಾ ಸಮಾನತೆ ಕುರಿತು ಬಸವಾದಿ ಶರಣರ ಆಶಯಕ್ಕೆ ಮತ್ತು ಭಾರತ ಸಂವಿಧಾನ ಆಶಯಕ್ಕೆ ಸಾಕ್ಷಿಭೂತರಾಗಿದ್ದಾರೆ ಎಂದರು.

ವೇದಿಕೆಯಲ್ಲಿ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರದ ಅಧ್ಯಕ್ಷೆ ಜಯಶ್ರೀ ವಸ್ತ್ರದ, ಸದಸ್ಯೆ ಗಿರಿಜಾ ಅಂಗಡಿ, ಮಾರ್ಗದರ್ಶಕರಾದ ಡಾ. ಎಂ.ವಿ. ಐಹೊಳ್ಳಿ ಉಪಸ್ಥಿತರಿದ್ದರು. ಭಾರತಿ ಪಾಟೀಲ (ಪಲ್ಲೇದ) ಸ್ಪರ್ಧಿಗಳಿಗೆ ಕ್ರೀಡಾ ಪ್ರತಿಜ್ಞಾವಿಧಿ ಬೋಧಿಸಿದರು. ಕ್ರೀಡಾಕೂಟದಲ್ಲಿ ವೇಗದ ನಡಿಗೆ, ಲಗೋರಿ ಸ್ಟ್ಯಾಂಡ್ ಬೀಳಿಸುವುದು, ಯೋಗಾಸನ, ಯೋಗ ಆಶುಭಾಷಣ, ಪುಟಾಣಿ-ಕಡ್ಡಿಬೇಳೆ ಬೇರ್ಪಡಿಸುವದು ಹೀಗೆ ಒಟ್ಟು 5 ಸ್ಪರ್ಧೆಗಳನ್ನು ನಡೆಸಲಾಯಿತು. ಒಟ್ಟು 30 ಜನ ಸ್ಪರ್ಧಿಗಳು ಭಾಗವಹಿಸಿದ್ದರು.

ಬಸವೇಶ್ವರ ಪ್ರಾಥಮಿಕ ಶಾಲೆಯ ದೈಹಿಕ ಶಿಕ್ಷಣ ಶಿಕ್ಷಕ ಎಸ್.ಎಂ. ಬುರಡಿ ಕ್ರೀಡಾಕೂಟದ ನಿರ್ಣಾಯಕರಾಗಿ ಕಾರ್ಯನಿರ್ವಹಿಸಿದರು. ಗೌರಿ ಜೀರಂಕಳಿ ಪ್ರಾರ್ಥನೆ ಹೇಳಿದರು. ಶಾಂತಾ ಕುಂದಗೋಳ ಸ್ವಾಗತಿಸಿದರು. ಸುಲೋಚನಾ ಐಹೊಳ್ಳಿ ಪರಿಚಯಿಸಿದರು. ಶಾಂತಾ ಮುಂದಿನಮನಿ ಕಾರ್ಯಕ್ರಮ ನಿರೂಪಿಸಿದರು. ವಿಜಯಲಕ್ಷ್ಮೀ ಮೇಕಳಿ ವಂದಿಸಿದರು.

# ಭಾರತ ಹಲವು ಭಾಷೆಗಳ ತವರೂರು

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಾತೃಭಾಷೆಯ ಜೊತೆಗೆ ಇನ್ನೊಂದು ಭಾಷೆಯನ್ನು ಗೌರವಿಸುವ ಮನೋಭಾವ ಎಲ್ಲರಲ್ಲೂ ಬರಬೇಕು' ಎಂದು ಹಂಪಿ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಪ್ರೊ. ಎ.ಮುರಿಗೆಪ್ಪ ಅಭಿಪ್ರಾಯಪಟ್ಟರು.

ಕರ್ನಾಟಕ ವಿಶ್ವವಿದ್ಯಾಲಯದ ಮಾನಸೋಲ್ಲಾಸ ಸಭಾಭವನದಲ್ಲಿ ಕರ್ನಾಟಕ ರಾಜ್ಯ ಮಹಾವಿದ್ಯಾಲಯ ಶಿಕ್ಷಕ ಸಂಘ, ನವದೆಹಲಿ ಭಾರತೀಯ ಭಾಷಾ ಸಮಿತಿ ಆಶ್ರಯದಲ್ಲಿ ಆಯೋಜಿಸಿದ್ದ ಒಂದು ದಿನದ ರಾಷ್ಟ್ರ ಮಟ್ಟದ ಭಾರತೀಯ ಭಾಷಾ ಸಮ್ಮೇಳನ ಉದ್ಘಾಟಿಸಿ ಅವರು ಮಾತನಾಡಿದರು.



ದೇಶದಲ್ಲಿ 160 ಭಾಷೆಗಳಲ್ಲಿ, 60 ಭಾಷೆಗಳು ಅಳಿವಿನಂಚಿನಲ್ಲಿದ್ದು, ಕರ್ನಾಟಕದಲ್ಲಿ 40 ಭಾಷೆಗಳಲ್ಲಿ 4 ಭಾಷೆಗಳು ಈಗಾಗಲೇ ಕಣ್ಮರೆಯಾಗಿವೆ. ಒಂದು ಭಾಷೆಯಿಂದ ಇನ್ನೊಂದು ಭಾಷೆ ಕೊಡಕೊಳ್ಳುವಿಕೆಯಿಂದ ಭಾಷೆಗಳು ಬೆಳೆಯುತ್ತದೆ. ಇಂಗ್ಲೀಷ್‌ನಲ್ಲಿ ಗ್ರೀಕ್ ಮತ್ತು ಲ್ಯಾಟೀನ್ ಭಾಷೆಯ ಶಬ್ದಗಳನ್ನು ತೆಗೆದರೆ ಅದಕ್ಕೆ ಮಹತ್ವವೇ ಕಡಿಮೆಯಾಗುತ್ತದೆ. ಭಾರತ ದೇಶ ಹಲವಾರು ಭಾಷೆಗಳ ತವರೂರು. ಎಲ್ಲ ಭಾಷೆಗಳೂ ತನ್ನದೇ ಆದ ವೈಶಿಷ್ಟ್ಯತೆ ಹೊಂದಿವೆ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ಕೆ.ಬಿ. ಗುಡಿಸಿ ಮಾತನಾಡಿ, ಭಾಷೆ ಬಳಕೆಯಾಗದೇ ಹೋದಲ್ಲಿ ಅದು ನಾಶವಾಗುತ್ತದೆ. ಸಿನೇಮಾಗಳಿಂದ ಕೂಡ ಭಾಷೆಯ ಕಲಿಕೆ ಹೆಚ್ಚುತ್ತದೆ ಎಂದ ಅವರು, ಕರ್ನಾಟಕದಲ್ಲಿ ಕನ್ನಡ ಬೆಳೆಯಬೇಕಾದರೆ ಕನ್ನಡ ಶಾಲೆಗಳನ್ನು ಮುಚ್ಚಬಾರದು ಎಂದರು.

ಕಾರ್ಯಕ್ರಮದಲ್ಲಿ ಕವಿವಿ ಹಣಕಾಸು ಅಧಿಕಾರಿ ಪ್ರೊ. ಸಿ.ಕೃಷ್ಣಮೂರ್ತಿ, ಸಂಘಟನಾ ಕಾರ್ಯದರ್ಶಿ ಪ್ರೊ. ಎನ್.ಎಚ್. ಕಲ್ಲೂರು, ಸಂಯೋಜಕರಾದ ಡಾ. ಎ.ಬಿ. ವೇದಮೂರ್ತಿ, ಸಂಚಾಲಕರಾದ ಡಾ. ಜಿ.ಕೆ. ಬಡಿಗೇರ ಉಪಸ್ಥಿತರಿದ್ದರು. ಪ್ರೊ.ಶಾಮಲಾ ರತ್ನಾಕರ ನಿರೂಪಿಸಿದರು.

# ಶೃದ್ಧಾ-ಭಕ್ತಿಯಿಂದ ಜರುಗಿದ ಜಿಂದೆ ಶ್ಯಾವಲಿ ಉರೂಸ್

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಪವಾಡ ಪುರುಷ ಹಜರತ್ ಜಿಂದೆ ಶ್ಯಾವಲಿಯವರ 56ನೇ ಉರುಸು ಉತ್ಸವ ಬುಧವಾರ ಸಾವಿರಾರು ಹಿಂದೂ-ಮುಸಲ್ಮಾನರ ಶೃದ್ಧಾ ಭಕ್ತಿಯ ನಡುವೆ ಸಂಭ್ರಮದಿಂದ ಜರುಗಿತು. ಮುಸ್ಲಿಮ್ ಜಮಾತ ಅಂಜುಮನ್ ಏ ಇಸ್ಲಾಮ್ ಕಮಿಟಿಯ ಆಶ್ರಯದಲ್ಲಿ ಲಕ್ಕುಂಡಿ ಮತ್ತು ಕದಾಂಪೂರ ಗ್ರಾಮದ ಮಧ್ಯೆ ಇರುವ ಜಿಂದಾಶ್ಯಾವಲಿ ದರ್ಗಾದ ಗದ್ದುಗೆಗೆ ಭಕ್ತಾಧಿಗಳು ಸಕ್ಕರೆ ನೈವೇದ್ಯವನ್ನು ಅರ್ಪಿಸುವುದರ ಮೂಲಕ ತಮ್ಮ ಸಂಕಲ್ಪವನ್ನು



ಸಮರ್ಪಿಸಿದರು.

ಬೆಳಿಗ್ಗೆ ಪುಷ್ಪ ಗುಚ್ಛ ಸಮರ್ಪಣೆಯ ಮೂಲಕ ಉರುಸು ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು. ಇದಕ್ಕೂ ಪೂರ್ವ ಗ್ರಾಮದಿಂದ ಮೆರವಣಿಗೆ ಮುಖಾಂತರ ಜಂದೀಸಾಬ ಮುಲ್ಲಾ ಅವರು ಹೊತ್ತುಕೊಂಡು ಬಂದಿದ್ದ ಗಂಧವನ್ನು ಗದ್ದುಗೆಗೆ ಅರ್ಪಿಸಲಾಯಿತು. ಈ ಸಂದರ್ಭದಲ್ಲಿ ನೂರಾರು ಭಕ್ತರು ಗಂಧವನ್ನು ಪಡೆದುಕೊಂಡು ಆಶೀರ್ವಾದವನ್ನು ಪಡೆದರು. ನಂತರ ಅನ್ನ ಸಂತರ್ಪಣೆ, ವಿಧಿ-ವಿಧಾನಗಳೊಂದಿಗೆ ಜ್ಯೋತಿ ಬೆಳಗಿಸುವ ಕಾರ್ಯಕ್ರಮ ನಡೆಯಿತು.

ರಾತ್ರಿ ಕಲಕತ್ತಾದ ಜಹಾಂಗೀರ್ ಅಲಮ್‌ನೂರಿ ಅವರಿಂದ ಬಯಾನ ಕಾರ್ಯಕ್ರಮ, ರಿವಾಯತ್ ಕವಾಲಿ, ಜಾನಪದ ಸಂಗೀತ ಕಾರ್ಯಕ್ರಮಗಳು ಜನಮನ ಸೆಳೆದವು. ವಿಶೇಷವಾಗಿ ಸಂದಲ್ ಗಂಧ ಮೆರವಣಿಗೆಯಲ್ಲಿ ಪಾಲ್ಗೊಂಡ ಗುಡಗೇರಿಯ ತಾಜ್ ಮ್ಯೂಜಿಕಲ್ ಬ್ರಾಸ್ ಬ್ಯಾಂಡ್ ಕಂಪನಿಯ ಕಲಾವಿದರು ಹಾಡಿದ ಕನ್ನಡ, ಹಿಂದಿ ರಸಮಂಜರಿ ಕಾರ್ಯಕ್ರಮ ಮಂತ್ರಮುಗ್ಧರನ್ನಾಗಿಸಿತು.

## ಚುನಾವಣೆ ಕಾರಣ ನೇಮಕಾತಿ ಪ್ರಕ್ರಿಯೆಗಳ ನಿಲ್ಲಿಸಲು ಸಾಧ್ಯವಿಲ್ಲ; ರಾಜ್ಯ ಸರ್ಕಾರಕ್ಕೆ ಹೈಕೋರ್ಟ್

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಚುನಾವಣೆಯ ಕಾರಣಕ್ಕಾಗಿ ನೇಮಕಾತಿ ಪ್ರಕ್ರಿಯೆಗಳನ್ನು ನಿಲ್ಲಿಸಲು ಸಾಧ್ಯವಿಲ್ಲ. ಆರಂಭವಾಗಿದ್ದ ನೇಮಕಾತಿ ಪ್ರಕ್ರಿಯೆನ್ನು ಪೂರ್ಣಗೊಳಿಸಬೇಕು ಎಂದು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ಸೂಚನೆ ನೀಡಿದೆ.

ಲೋಕಸಭಾ ಚುನಾವಣೆ ಘೋಷಣೆಯಾಗಿರುವ ಹಿನ್ನೆಲೆ, ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದ (ರೇರಾ) ಮೇಲ್ಮನವಿ ನ್ಯಾಯಾಧಿಕರಣಕ್ಕೆ ನಡೆಯುತ್ತಿದ್ದ ಅಧ್ಯಕ್ಷರು ಮತ್ತು ಸದಸ್ಯರ ನೇಮಕಾತಿ ಪ್ರಕ್ರಿಯೆಗಳನ್ನು ಸರ್ಕಾರ ಸ್ಥಗಿತಗೊಳಿಸಿತ್ತು. ಅದನ್ನು ಪ್ರಶ್ನಿಸಿ ಕೆಲ ಪತ್ರಕರ್ತರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು.

ಈ ಹಿಂದೆ, ಫೆಬ್ರವರಿ 26ರಂದು ಅರ್ಜಿ ವಿಚಾರಣೆ ನಡೆಸಿದ್ದ ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರಿದ್ದ ಪೀಠವು, ರೇರಾ ಮೇಲ್ಮನವಿ ನ್ಯಾಯಮಂಡಳಿಗೆ ಅದರ ಅಧ್ಯಕ್ಷರು ಮತ್ತು ಸದಸ್ಯರನ್ನು ನೇಮಿಸಬೇಕು ಮತ್ತು ಕ್ರಿಯಾತ್ಮಕಗೊಳಿಸಬೇಕು ಎಂದು ಹೇಳಿತ್ತು. ಸರ್ಕಾರಕ್ಕೆ ಮೂರು ವಾರಗಳ ಕಾಲಾವಕಾಶ ನೀಡಿತ್ತು.

ಆ ಆದೇಶದ ಪಾಲನೆಗೆ ಸಂಬಂಧ ಹೈಕೋರ್ಟ್ ವಿಚಾರಣೆ ನಡೆಸಿದೆ. ಸರ್ಕಾರದ ಪರವಾಗಿ ವಾದ ಮಂಡಿಸಿದ ಅಡ್ವೊಕೇಟ್ ಜನರಲ್ ಕೆ.ಶಶಿಕಿರಣ್ ಶೆಟ್ಟಿ ಅವರು, ಹುದ್ದೆಗಳ ಭರ್ತಿಗೆ ಸಂಬಂಧಿಸಿದಂತೆ ನ್ಯಾಯಾಲಯ ನೀಡಿರುವ ಆದೇಶಗಳನ್ನು ಜಾರಿಗೊಳಿಸಲು ಚುನಾವಣೆ ಘೋಷಣೆ ಅಡ್ಡಿಯಾಗಿದೆ ಎಂದು ಹೇಳಿದರು.

ವಾದ ಆಲಿಸಿದ ನ್ಯಾಯಪೀಠ ಚುನಾವಣೆ ಕಾರಣ ನೇಮಕಾತಿಗಳನ್ನು ನಿಲ್ಲಿಸಲು ಸಾಧ್ಯವಿಲ್ಲ. ನೇಮಕಾತಿಯನ್ನು ಪೂರ್ಣಗೊಳಿಸಬೇಕು ಎಂದು ಸರ್ಕಾರಕ್ಕೆ ಸೂಚಿಸಿತು.

### ಜಿಲ್ಲಾ, ತಾಲೂಕು ತಂಬಾಕು ನಿಯಂತ್ರಣ ತನಿಖಾ ದಳದಿಂದ ವಿವಿಧೆಡೆ ದಾಳಿ

# ಕೋಟ್ಪಾ ಕಾಯ್ದೆ ಉಲ್ಲಂಘನೆ ವಿರುದ್ಧ ಕ್ರಮ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ.ವೆಂಕಟೇಶ ರಾಥೋಡ ಅವರ ಮಾರ್ಗದರ್ಶನದಲ್ಲಿ ಮಾರ್ಚ್ ತಿಂಗಳಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ತನಿಖಾ ದಳ ಹಾಗೂ ತಾಲೂಕಾ ತಂಬಾಕು ನಿಯಂತ್ರಣ ತನಿಖಾ ದಳ ಗದಗ, ಮುಂಡರಗಿ, ರೋಣ, ವತಿಯಿಂದ ಗದಗ ನಗರದ ಮುಳಗುಂದ ನಾಕಾ, ಜಿಲ್ಲಾ ಆಸ್ಪತ್ರೆ ಆವರಣ, ಅಂಜುಮನ್ ಕಾಲೇಜು ಎದುರು, ಹಾತಲಗೇರಿ ನಾಕಾ, ಅಡವಿಸೊಮಪುರ, ಲಕ್ಕುಂಡಿ, ಮುಂಡರಗಿ, ಗಜೇಂದ್ರಗಡ, ಮುಂಡರಗಿ-ಕೊರ್ಲಹಳ್ಳಿ ಕ್ರಾಸ್, ಡಂಬಳ ಇತ್ಯಾದಿ ಸ್ಥಳಗಳಲ್ಲಿ ಕೋಟ್ಪಾ ದಾಳಿ ಹಮ್ಮಿಕೊಳ್ಳಲಾಯಿತು.



ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಹಾಗೂ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ-2003ರ ಕುರಿತು ಸಾರ್ವಜನಿಕರಲ್ಲಿ ಹಾಗೂ ಅಂಗಡಿಕಾರರಲ್ಲಿ ಜಾಗೃತಿ ಮೂಡಿಸಲಾಯಿತು. ವಿದ್ಯಾರ್ಥಿಗಳು ತಂಬಾಕು ಉತ್ಪನ್ನಗಳಿಂದ ದೂರವಿರುವಂತೆ, ಚಟಕ್ಕೆ ಬಲಿಯಾಗದಂತೆ ಜಾಗ್ರತಿ ಮೂಡಿಸುವ ಉದ್ದೇಶದಿಂದ ಶಾಲಾ ಕಾಲೇಜು ಆವರಣದಿಂದ 100 ಗಜದವರೆಗೆ ತಂಬಾಕು ಮಾರಾಟ ನಿಷೇಧ, ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ಪ್ರತಿಯೊಂದು ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕ ಬಿತ್ತರಿಸುವದು ಆ ಸ್ಥಳದ ಮಾಲೀಕರ ಜಾವಾಬ್ದಾರಿಯಾಗಿರುತ್ತದೆ.

ಕೆಲವು ಅಂಗಡಿಗಳ ಹಿಂದೆ ಧೂಮಪಾನ ಅಡ್ಡಾಗಳನ್ನು ಮಾಡಿಕೊಂಡಿರುವವರ ವಿರುದ್ಧ ಕೂಡಾ ಕ್ರಮ ವಹಿಸಲಾಯಿತು. ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡುವದರಿಂದ ಅಮಾಯಕರ ಆರೋಗ್ಯದ ಮೇಲೆ ಪರಿಣಾಮ ಬೀರುತ್ತಿರುವದು ಕಂಡು ಬಂದಿದೆ. ತಂಬಾಕು ಕುರಿತ ಜಾಹೀರಾತು ನಿಷೇಧಿಸುವದು, 18 ವರ್ಷದೊಳಗಿನವರಿಗೆ ತಂಬಾಕು ಮಾರಾಟ ನಿಷೇಧಿಸುವದು, ತಂಬಾಕು ಉತ್ಪನ್ನಗಳ ಪ್ಯಾಕ್ ಮೇಲೆ ಶೇ. 85ರಷ್ಟು ಆರೋಗ್ಯ ಎಚ್ಚರಿಕೆ ಚಿಹ್ನೆ ಕಡ್ಡಾಯ ಈ ಕುರಿತು ಮಾಹಿತಿ ಹಾಗೂ ಜಾಗೃತಿ ಮೂಡಿಸಿ ಉಲ್ಲಂಘನೆ ಮಾಡಿದವರ ವಿರುದ್ಧ ಎಚ್ಚರಿಕೆ ನೀಡಿ ಒಟ್ಟು 83 ಪ್ರಕರಣ ದಾಖಲಿಸಿ, ರೂ. 16350 ದಂಡ ಸಂಗ್ರಹಿಸಲಾಯಿತು. ತಂಬಾಕು ಉತ್ಪನ್ನಗಳ ಮಾರಾಟ ಹಾಗೂ ಅದರ ಉಪಯೋಗಕ್ಕೆ ಕೋಟ್ಪಾ ಕಾಯ್ದೆ ಅಡಿಯಲ್ಲಿ ಅವಕಾಶವಿದ್ದು, ಅದನ್ನು ಉಲ್ಲಂಘಿಸಿದಲ್ಲಿ ಕಾನೂನು ರೀತಿ ಕ್ರಮ ವಹಿಸಲಾಗುವದು.

ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಸಲಹೆಗಾರರಾದ ಗೋಪಾಲ ಸುರಪುರ, ಪೊಲೀಸ್ ಇಲಾಖೆಯ ಬಿ.ಎನ್. ಚಳಗೆರಾ, ಎಂ.ಆಯ್. ಮುಲ್ಲಾ, ಎಎಸ್‌ಐ ಕುಮಾರಸ್ವಾಮಿ, ಸಚಿನ್, ರೇಷ್ಮಾ, ಬೇಗಂ, ನದಾಫ್, ವೈ.ಎನ್. ಕಡೆಮನಿ, ಮಂಜುಳಾ ಸಜ್ಜನ್, ತಾಲೂಕಾ ಆರೊಗ್ಯ ಶಿಕ್ಷಣಾಧಿಕಾರಿ ಮುಂಡರಗಿ, ಎಂ.ಎಂ. ದೊಡ್ಡಮನಿ ಮುಂತಾದವರು ಉಪಸ್ಥಿತರಿದ್ದರು.



### 'ಸಾರ್ವಜನಿಕರಿಗೆ ಮತದಾನ ಜಾಗೃತಿ ಜಾಥಾ'ದಲ್ಲಿ ಶ್ರೀಶೈಲ್ ತಳವಾರ

# ಕಡ್ಡಾಯ ಮತದಾನ ನಮ್ಮ ಹಕ್ಕು

■ ವಿಜಯಸಾಕ್ಷಿ ಸುದ್ದಿ, ನರಗುಂದ

ಮೇ 7ರ ಮತದಾನದ ದಿನದಂದು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಬೇಕೆಂದು ನರಗುಂದ ವಿಧಾನಸಭಾ ಕ್ಷೇತ್ರದ ಸಹಾಯಕ ಚುನಾವಣಾಧಿಕಾರಿ ಹಾಗೂ ನರಗುಂದ ತಹಸೀಲ್ದಾರ ಶ್ರೀಶೈಲ್ ತಳವಾರ ಹೇಳಿದರು.

ನರಗುಂದ ನಗರದಲ್ಲಿ ಗದಗ ಜಿಲ್ಲಾ ಮತ್ತು ನರಗುಂದ ತಾಲೂಕು ಚುನಾವಣೆ ಸ್ವೀಪ್ ಸಮಿತಿ, ವಿವಿಧೋದ್ದೇಶ ಪುನರ್ ವಸತಿ (ಒಖಫ) ಮತ್ತು ಗ್ರಾಮೀಣ ಪುನರ್ ವಸತಿ (ಗಿಖಫ) ಹಾಗೂ ತಾಲೂಕು ಪಂಚಾಯತ ನರಗುಂದ ವತಿಯಿಂದ ಹಮ್ಮಿಕೊಂಡಿದ್ದ 'ಸಾರ್ವಜನಿಕರಿಗೆ ಮತದಾನ ಜಾಗೃತಿ ಜಾಥಾ'ದಲ್ಲಿ ಭಾಗವಹಿಸಿ ಅವರು ಮಾತನಾಡಿದರು.




ಲೋಕಸಭೆ ಚುನಾವಣೆಯಲ್ಲಿ ಎಲ್ಲ ಮತದಾರರು ಕಡ್ಡಾಯವಾಗಿ ಮತದಾನ ಮಾಡಬೇಕು. ಮತದಾನ ನಮ್ಮ ಹಕ್ಕು, ನಮ್ಮ ಇಷ್ಟದ ಅಭ್ಯರ್ಥಿಗೆ ಮತ ಚಲಾಯಿಸುವ ಕೆಲಸ ನಮ್ಮದಾಗಬೇಕು. ಈ ಬಾರಿ ಲೋಕಸಭಾ ಚುನಾವಣೆಯಲ್ಲಿ ಶೇ.100ರಷ್ಟು ಮತದಾನ ಮಾಡಿದರೆ ಮಾತ್ರ ಪ್ರಜಾಪ್ರಭುತ್ವದ ಪ್ರಾಮುಖ್ಯತೆಗೆ ಅರ್ಥ ಬರುತ್ತದೆ. ಹೆದರಿಕೆ-ಬೆದರಿಕೆಗೆ ಅಂಜದೇ ಧೈರ್ಯವಾಗಿ ಮತವನ್ನು ಚಲಾಯಿಸಿ, ಸಂವಿಧಾನ ನೀಡಿರುವ ಹಕ್ಕನ್ನು ಚಲಾಯಿಸಿ ಎಂದರು.

ಜಾಗೃತಿ ಜಾಥಾದಲ್ಲಿ ಭಾಗವಹಿಸಿದ ಆಶಾ ಕಾರ್ಯಕರ್ತೆಯರು, ಅಧಿಕಾರಿ-ಸಿಬ್ಬಂದಿ ವರ್ಗದವರಿಗೆ ತಾ.ಪಂ ಮಾಹಿತಿ ಮತ್ತು ಶಿಕ್ಷಣ ಸಂಯೋಜಕ ಸುರೇಶ ಬಾಳಿಕಾಯಿ ಮತದಾನ ಪ್ರತಿಜ್ಞಾ ವಿಧಿಯನ್ನು ಬೋಧಿಸಿದರು.

ನಗರದ ಪುರಸಭೆ ಮುಖ್ಯ ಕಚೇರಿಯಿಂದ ಮತದಾನ ಜಾಗೃತಿ ಜಾಥಾ ಆರಂಭವಾಗಿ ನಗರದ ಟಿಎಂಸಿ ರೋಡ್, ಸರ್ವಜ್ಞ ಸರ್ಕಲ್, ಹುಬ್ಬಳ್ಳಿ-ಬಿಜಾಪುರ ಹೆದ್ದಾರಿ ಮೂಲಕ ಸಂಚರಿಸಿ ನಗರದ ಶಿವಾಜಿ ಸರ್ಕಲ್‌ವರೆಗೆ ಸಾಗಿತು.

ಜಾಥಾದಲ್ಲಿ ನರಗುಂದ ಚುನಾವಣಾಧಿಕಾರಿ ಡಾ. ಹಂಪಣ್ಣ ಸಜ್ಜನ ತಾ.ಪಂ ಸಿಬ್ಬಂದಿ ವರ್ಗ, ಒಖಫ, ಗಿಖಫ ಕಾರ್ಯಕರ್ತರು ಹಾಜರಿದ್ದರು.

ತಾಲೂಕು ಸ್ವೀಪ್ ಸಮಿತಿ ಅಧ್ಯಕ್ಷರು ಹಾಗೂ ತಾ.ಪಂ ನರಗುಂದದ ಕಾರ್ಯನಿರ್ವಾಹಕ ಅಧಿಕಾರಿ ಸೋಮಶೇಖರ ಬಿರಾದಾರ ಮಾತನಾಡಿ, ಸಾರ್ವಜನಿಕರು ಮತದಾನದಿಂದ ತಪ್ಪಿಸಿಕೊಳ್ಳದೇ ತಮ್ಮ ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಕಡ್ಡಾಯವಾಗಿ ಮತ ಚಲಾಯಿಸಿಬೇಕೆಂದು ತಿಳಿಸಿದರು.

### ದೇವರ ದಾಸಿಮಯ್ಯನವರ ಜಯಂತಿ

# ಮಕ್ಕಳಿಗೆ ವಿವಿಧ ಸ್ಪರ್ಧೆ, ನಾಟಕೋತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ದೇವಾಂಗ ಸಂಘ ಮತ್ತು ದೇವರ ದಾಸಿಮಯ್ಯ ಪ್ರತಿಷ್ಠಾಪನ ಸಮಿತಿ ವತಿಯಿಂದ ಏಪ್ರಿಲ್ 13ರಂದು ನಡೆಯಲಿರುವ ದೇವರ ದಾಸಿಮಯ್ಯನವರ ಜಯಂತಿ ಅಂಗವಾಗಿ ಮಕ್ಕಳಿಗೆ ವಚನ ಸ್ಪರ್ಧೆ, ನಿಬಂಧ ಸ್ಪರ್ಧೆ ಹಾಗೂ ಭಾಷಣ ಸ್ಪರ್ಧೆಗಳನ್ನ ಏ.12ರಂದು ಮುಂಜಾನೆ 11ಕ್ಕೆ ಶ್ರೀ ಹಳೆ ಬನಶಂಕರಿ ದೇವಸ್ಥಾನದ ಆವರಣದಲ್ಲಿರುವ ಶ್ರೀ ಬನಶಂಕರಿ ದೇವಿ ಸಭಾಭವನದ ಕಲ್ಯಾಣ ಮಂಟಪ ಮತ್ತು ನೌಕರ ಸಂಘದ ಕಚೇರಿಯಲ್ಲಿ ಏರ್ಪಡಿಸಲಾಗಿದ್ದು, ಗದಗ ಜಿಲ್ಲಾ ನೇಕಾರ ಸಮುದಾಯಗಳ ಮಕ್ಕಳು ಇದರಲ್ಲಿ ಭಾಗವಹಿಸಬಹುದು.



ವಚನ ಸ್ಪರ್ಧೆಯಲ್ಲಿ ಭಾಗವಹಿಸುವ ಮಕ್ಕಳ ವಯೋಮಿತಿ 7ರಿಂದ 12 ಆಗಿದ್ದು, ಶ್ರೀ ದೇವರ ದಾಸಿಮಯ್ಯನವರ ಜೀವನ ಚರಿತ್ರೆ ನಿಬಂಧ ಸ್ಪರ್ಧೆಯಲ್ಲಿ 13ರಿಂದ 18 ವರ್ಷದ ಮಕ್ಕಳು ಭಾಗವಹಿಸಬಹುದು. 18 ವರ್ಷದ ಮೇಲ್ಪಟ್ಟ ಮಕ್ಕಳು ಭಾಷಣ ಸ್ಪರ್ಧೆಯಲ್ಲಿ ಭಾಗವಹಿಸಬಹುದು. ಈ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಆಕರ್ಷಕ ಬಹುಮಾನ ಮತ್ತು ಪ್ರಶಸ್ತಿ ಪತ್ರಗಳನ್ನು ನೀಡಲಾಗುವುದು. ಇದರಲ್ಲಿ ಭಾಗವಹಿಸುವಂತ ಮಕ್ಕಳು ಈ ಕೆಳಗಿನ ದೂರವಾಣಿ ಸಂಖ್ಯೆಗಳನ್ನು ಸಂಪರ್ಕಿಸಬಹುದು.

ಗದಗ: ವಸಂತ ಇಂಜಿನಿ-9591913636, ಶ್ರೀನಿವಾಸ ಹುಬ್ಬಳ್ಳಿ-9902852848, ನವೀನ ಮೇಡಿ -9663030006, ಲಕ್ಷ್ಮೇಶ್ವರ: ಮಹಾಬಳೆಶ್ವರಪ್ಪ ಬೇವಿನಮರದ-9845324157, ಶಿಗ್ಗಿ: ಸುಭಾಸ ಹಲಗೂರು 9986983028, ಗಜೇಂದ್ರಗಡ: ಪ್ರಭಾಕರ ಶೇಲ್ಲೇದ-9845820595, ಸಂಕಣ್ಣ ಕಡ್ಡಿ 9448765655, ಶ್ರೀಧರ ಬಿದರಳ್ಳಿ-9886762654, ಮುಂಡರಗಿ: ಶಂಕರಗೌಡ ಪಾಟೀಲ-9880264759, ನರಗುಂದ: ರಾಮಕೃಷ್ಣ ಗೊಂಬಿ 7026458116.

ಅದೇ ದಿನ ಸಂಜೆ 6 ಗಂಟೆಗೆ ಶ್ರೀ ಹಳೆ ಬನಶಂಕರಿ ದೇವಸ್ಥಾನದ ಆವರಣದಲ್ಲಿ ದೇವಲ ಮಹರ್ಷಿಯ ಜೀವನ ಚರಿತ್ರೆಯ ನಾಟಕೋತ್ಸವ ಜರುಗಲಿದ್ದು, ಗದಗ ಜಿಲ್ಲಾ ನೇಕಾರ ಸಮುದಾಯದ ಮಕ್ಕಳು ಮತ್ತು ಪಾಲಕರು ಈ ಎಲ್ಲ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಸಂಘದ ಅಧ್ಯಕ್ಷ ದಶರಥ ರಾಜ್ ಕೊಳ್ಳಿ, ದೇವರ ದಾಸಿಮಯ್ಯ ಪ್ರತಿಷ್ಠಾಪನ ಸಮಿತಿ ಅಧ್ಯಕ್ಷ ಅನಿಲ್ ಗಡ್ಡಿ ವಿನಂತಿಸಿದ್ದಾರೆ.

# ಸೂಕ್ತ ದಾಖಲೆ ಇಲ್ಲದ ಪ್ಯಾಂಟ್ ಬಟ್ಟೆ ವಶಕ್ಕೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಮಾರ್ಚ್ 26ರ ಬೆಳಿಗ್ಗೆ ಅಗ್ರಿ ಯುನಿವರ್ಸಿಟಿ ಚೆಕ್ ಪೋಸ್ಟ್‌ನಲ್ಲಿ ತಪಾಸಣೆ ವೇಳೆಯಲ್ಲಿ ಕಾರ್ ಒಂದರಲ್ಲಿ ಸೂಕ್ತ ದಾಖಲೆಗಳಿಲ್ಲದೆ ಸಾಗಾಟ ಮಾಡುತ್ತಿದ್ದ ರೂ. 3,35,500 ಮೌಲ್ಯದ ಪ್ಯಾಂಟ್ ಬಟ್ಟೆಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ತಿಳಿಸಿದ್ದಾರೆ.



ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾ.26ರ ಬೆಳಿಗ್ಗೆ 9 ಗಂಟೆ ಸುಮಾರಿಗೆ ಬೆಳಗಾವಿಯಿಂದ ಗದಗ ನಗರಕ್ಕೆ ತೆರಳುತ್ತಿದ್ದ ಕೆಎ-01, ಎಂ.ಎಲ್-1243 ಸಂಖ್ಯೆಯ ಮಾರುತಿ ಸುಜುಕಿ ಏರ್ಟಿಗಾ ವಾಹನವನ್ನು ಅಗ್ರಿ ಯುನಿವರ್ಸಿಟಿ ಚೆಕ್ ಪೋಸ್ಟ್‌ನಲ್ಲಿ ತಪಾಸಣೆ ಮಾಡಿದಾಗ ಪ್ರಸಿದ್ಧ ಕಂಪನಿಗಳ 1,342 ಪ್ಯಾಂಟ್ ಪೀಸ್ ಬಟ್ಟೆಗಳು ದೊರೆತಿವೆ. ಇವುಗಳ ಮೌಲ್ಯ ರೂ. 3,35,500 ಆಗಿದ್ದು, ಇವು ವಾಹನ ಮಾಲೀಕ ಮೋಹಮ್ಮದ ಶಾಕೀರ್ ಶಾ ಅವರಿಗೆ ಸೇರಿವೆ. ಸೂಕ್ತವಾದ ದಾಖಲೆಗಳನ್ನು ಸಲ್ಲಿಸದಿರುವದರಿಂದ ಇವು ಗಳನ್ನು ಚುನಾವಣೆಗೆ ಬಳಸಬಹು ದಾದ ಸಂಶಯದ ಮೇಲೆ ವಶಕ್ಕೆ ಪಡೆದು ಪ್ರಕರಣ ದಾಖಲಿಸಲಾಗಿದೆ.

ಎಸಿ ಶಾಲಂ ಹುಸೇನ್, ತಹಸೀಲ್ದಾರ ಡಾ. ಡಿ.ಎಚ್. ಹೂಗಾರ ಅವರು ಎಂಸಿಸಿ ನೋಡಲ್ ಅಧಿಕಾರಿ ಮೋನಾ ರಾವುತ್, ಶಿವಪುತ್ರಪ್ಪ ಹೊಸಮನಿ ಅವರ ಮಾರ್ಗದರ್ಶನದಲ್ಲಿ ಎಸ್.ಎಸ್.ಟಿ ಮತ್ತು ಎಫ್.ಎಸ್.ಟಿ ತಂಡಗಳ ಸದಸ್ಯರು ಚೆಕ್ ಪೋಸ್ಟ್ ತಪಾಸಣೆ ಕಠಿಣಗೊಳಿಸಿದ್ದು, ಉತ್ತಮ ಕಾರ್ಯ ಮಾಡುತ್ತಿದ್ದಾರೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇನ್ನು ಮುಂದೆ ಗ್ರಾಹಕರು ಬಹು ವಿದ್ಯುತ್ ಸಂಪರ್ಕಗಳನ್ನು ಪಡೆಯಬಹುದು: KERC

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು (ಏಇಖಅ) ಆದೇಶವೊಂದನ್ನು ಹೊರಡಿಸಿದ್ದು, ಲೋ ಟೆನ್ಷನ್ (ಐಖ) ವಸತಿ ಗ್ರಾಹಕರು ತಮ್ಮ ಆವರಣದಲ್ಲಿ ಬಹು ಸಂಪರ್ಕಗಳನ್ನು ಪಡೆಯಲು ಅನುವು ಮಾಡಿಕೊಡುವಂತೆ ಎಲ್ಲಾ ಇಂಧನ ಪೂರೈಕೆ ನಿಗಮಗಳಿಗೆ (ಇಭಿಂಛ) ನಿರ್ದೇಶಿಸಿದೆ. ಇಂತಹ ಆದೇಶ ಹೊರಡಿಸಿರುವುದು ಇದೇ ಮೊದಲು ಎಂದು ಕೆಇಆರ್‌ಸಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಗ್ರಾಹಕರಿಂದ ಹೆಚ್ಚುತ್ತಿರುವ ದೂರುಗಳು ಮತ್ತು ಮನವಿಗಳ ಆಧಾರದ ಮೇಲೆ ಕೆಇಆರ್‌ಸಿ ಈ ಆದೇಶಗಳನ್ನು ಹೊರಡಿಸಿದೆ.

"ಗ್ರಾಹಕರಿಗೆ ವಿದ್ಯುತ್ ಪೂರೈಕೆಯಲ್ಲಿ ತೊಂದರೆಯಾಗುತ್ತಿದೆ ಎಂಬ ದೂರುಗಳು ಹಲವು ಬಂದಿವೆ.

### ಬೇಡಿಕೆಗಳಿಗೆ ಆಗ್ರಹಿಸಿ ತಿಮ್ಮಾಪೂರ ಗ್ರಾಮಸ್ಥರ ಧರಣಿ ಸತ್ಯಾಗ್ರಹ

# ಚುನಾವಣಾ ಬಹಿಷ್ಕಾರದ ಎಚ್ಚರಿಕೆ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಕಳೆದ 40 ವರ್ಷಗಳಿಂದ ಗ್ರಾಮಕ್ಕೆ ಅಗತ್ಯವಿರುವ ಮೂಲಭೂತ ಅಭಿವೃದ್ಧಿ ಕಾರ್ಯಗಳ ಬಗ್ಗೆ ನಿರ್ಲಕ್ಷ್ಯ ತೋರಿರುವ ರಾಜ್ಯ ಮತ್ತು ಕೇಂದ್ರ ಸರಕಾರದ ವಿರುದ್ಧ ಸಮೀಪದ ತಿಮ್ಮಾಪೂರ ಗ್ರಾಮಸ್ಥರು, ರಾಜ್ಯ ರೈತ ಸಂಘದ ನೇತೃತ್ವದಲ್ಲಿ ಬುಧವಾರ ಧರಣಿ ಸತ್ಯಾಗ್ರಹ ಆರಂಭಿಸಿದರು.

ಮುಂಜಾನೆ 11ಕ್ಕೆ ಚಕ್ಕಡಿ, ಟ್ರ್ಯಾಕ್ಟರ್‌ಗಳನ್ನು ಗದಗ-ಯಲಬುರ್ಗಾ ರಸ್ತೆಯಲ್ಲಿ ಅಡ್ಡಲಾಗಿ ನಿಲ್ಲಿಸಿ ಪ್ರತಿಭಟನೆ ಆರಂಭಿಸಲಾಯಿತು. ಇದರಿಂದ ಪ್ರಯಾಣಿಕರು ತೊಂದರೆ ಅನುಭವಿಸುವಂತಾಯಿತು.

ಧರಣಿ ಕೈಬಿಡುವಂತೆ ಗದಗ ಗ್ರಾಮೀಣ ಪೊಲೀಸರು ರೈತ ಸಂಘದ ಮುಖಂಡರಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಮಾತಿನ ಚಕಮಕಿ ನಡೆದು ಕೆಲಕಾಲ ಗದ್ದಲದ ವಾತವಾರಣ ಸೃಷ್ಟಿಯಾಯಿತು.



ಪಿಎಸ್‌ಐ ವಿ.ಎಮ್. ನದಾಫ, ಧರಣಿ ಮಾಡಲು ಪೊಲೀಸ್ ಠಾಣೆಯಿಂದ ಪರವಾನಿಗೆ ತೆಗೆದುಕೊಂಡಿಲ್ಲ, ಈಗ ಚುನಾವಣೆ ನೀತಿ ಸಂಹಿತೆ ಜಾರಿಯಿರುವುದರಿಂದ ಪ್ರತಿಭಟನೆ ಮಾಡುವಂತಿಲ್ಲ ಎಂದರು. ಈ ಮಾತಿಗೆ ಆಕ್ರೋಶ ವ್ಯಕ್ತಪಡಿಸಿದ ರೈತ ಮುಖಂಡರು, ನಾವು ಡಿ.ಸಿ ಅವರನ್ನು ಸಂಪರ್ಕಿಸಿ, ಮನವಿ ಸಲ್ಲಿಸಿ ಧರಣಿ ಮಾಡುವುದಾಗಿ ತಿಳಿಸಿದ್ದೇವೆ. ಅದರ ಪ್ರತಿಯನ್ನು ಸಹ ಪೊಲೀಸ್ ಠಾಣೆಗೆ ಕೊಟ್ಟಿದ್ದೇವೆ. ನಾವು ಪ್ರತಿಭಟನೆ ಕೈಬಿಡುವುದಿಲ್ಲ ಎಂದು ಪಟ್ಟು ಹಿಡಿದು ಧಿಕ್ಕಾರ ಕೂಗಿದರು.

ಗ್ರಾಮದ ಹಲವು ಸಮಸ್ಯೆಗಳ ಬಗ್ಗೆ ಕಳೆದ 40 ವರ್ಷಗಳಿಂದ ಸರಕಾರದ ಗಮನಕ್ಕೆ ತಂದರೂ ಕಾಳಜಿ ವಹಿಸಿಲ್ಲ. ಹೀಗಾಗಿ ಧರಣಿ ಸತ್ಯಾಗ್ರಹ ಮುಂದುವರೆಸಿ ಚುನಾವಣೆ ಬಹಿಷ್ಕಾರ ಮಾಡುತ್ತೇವೆ. ಸತ್ಯಾಗ್ರಹ ಕೈಬಿಡುವಂತೆ ಪೊಲೀಸರು ದೌರ್ಜನ್ಯವೆಸಗುತ್ತಿದ್ದು, ನಮ್ಮನ್ನು ಬಂಧಿಸಿದರೂ ಪ್ರತಿಭಟನೆ ಕೈಬಿಡುವುದಿಲ್ಲ.

– ಯಲ್ಲಪ್ಪ ಬಾಬರಿ.
ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರು.

ಸೋಮವಾರ ಡಿ.ಸಿ ಅವರಿಗೆ ಮನವಿ ಪತ್ರ ಸಲ್ಲಿಸಿದ್ದು, ಮಂಗಳವಾರ ಗ್ರಾಮಕ್ಕೆ ಭೇಟಿ ನೀಡಿದ ತಹಸೀಲ್ದಾರ, ದಂಡಾಧಿಕಾರಿಗಳು, ಹಾಗೂ ತಾ.ಪಂ ಅಧಿಕಾರಿಗಳು ಗ್ರಾಮಸ್ಥರೊಂದಿಗೆ ಸಂಧಾನ ಸಭೆ ನಡೆಸಿದರು. ತರುವಾಯ, ಅಧಿಕಾರಿಗಳು ಪತ್ರಿಕೆಯಲ್ಲಿ ಚುನಾವಣೆ ಬಹಿಷ್ಕಾರದಿಂದ ಹಿಂದೆ ಸರಿದಿದ್ದಾರೆ ಎಂದು ಸುಳ್ಳು ಪ್ರಕಟಣೆ ನೀಡಿದ್ದಾರೆ. ಧರಣಿ ಸ್ಥಳಕ್ಕೆ ಡಿ.ಸಿ ಅವರು ಬರಬೇಕು, ಅಧಿಕಾರಿಗಳು ಕ್ಷಮೆ ಯಾಚಿಸಬೇಕು ಎಂದು ರಾಜ್ಯ ರೈತ ಸಂಘಧ ಜಿಲ್ಲಾದ್ಯಕ್ಷ ಯಲ್ಲಪ್ಪ ಬಾಬರಿ, ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೊಗೀನ ಆಕ್ರೋಶ ವ್ಯಕ್ತ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಮಧ್ಯ ಭಾಗದಲ್ಲಿರುವ ಮದ್ಯದಂಗಡಿಯ ಪರವಾನಿಗೆ ರದ್ದುಗೊಳಿಸಬೇಕು. ಇದರಿಂದ ಯುವಕರು, ನಮ್ಮ ಪತಿಯರು ಮದ್ಯವ್ಯಸನಿಗಳಾಗಿ ಹಾಳಾಗುತ್ತಿದ್ದಾರೆ ಎಂದು ಪ್ರತಿಭಟನೆಯಲ್ಲಿ ಪಾಲ್ಗೊಂಡ 50 ಕ್ಕೂ ಹೆಚ್ಚು ಜನ ಮಹಿಳೆಯರು ಒತ್ತಾಯಿಸಿದರು.

ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷ ಅಂದಪ್ಪ ಹುರಳಿ, ಕೊಪ್ಪಳ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಜೀರಸಾಬ ತಳಕಲ್ಲ, ಕಳಕಪ್ಪ ಕ್ಯಾದಗುಂಪಿ, ಹುಚ್ಚಪ್ಪ ನಿಂಗಣ್ಣವರ, ಮಹಾದೇವಪ್ಪ ಕೋರಿ, ಅಂದಪ್ಪ ಕೋಳೂರು ಸೇರಿದಂತೆ ಗ್ರಾಮದ ಗಣ್ಯರು, ಗ್ರಾ.ಪಂ ಸದಸ್ಯರು ಭಾಗವಹಿಸಿದ್ದರು.

#### ಧರಣಿ ಹಿಂದಕ್ಕೆ

ಗ್ರಾಮದ ಬೇಡಿಕೆಗಳನ್ನು ಕೇಂದ್ರ ಚುನಾವಣಾ ಆಯೋಗಕ್ಕೆ ಕಳಿಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗವುದು ಎಂದು ಉಪ ತಹಸೀಲ್ದಾರ ಜಯಪ್ರಕಾಶ ಭಜಂತ್ರಿ ಭರವಸೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಪ್ರತಿಭಟನಾಕಾರರು, ಚುನಾವಣೆಗೂ ಮುನ್ನವೇ ಕಾಮಗಾರಿಗಳು ಆರಂಭವಾಗಬೇಕು. ತಪ್ಪಿದಲ್ಲಿ ಚುನಾವಣೆ ಬಹಿಷ್ಕರಿಸಲಾಗುವುದು ಎಂದು ಎಚ್ಚರಿಸಿ ಪ್ರಭಟನೆಯನ್ನು ಮುಕ್ತಾಯಗೊಳಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka